ಸಂಪುಟ : 11 ಸಂಚಿಕೆ: 65 ಪುಟ : 4+2 ಬೆಲೆ: 3.00 ಶುಕ್ರವಾರ ಎಪ್ರಿಲ್ 10 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 65 Pages : 4+2 Price : 3.00 Friday April 10 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಜಿ.ಎಸ್. ಪಾಟೀಲರ ಹುಟ್ಟು ಹಬ್ಬದ ಹಿನ್ನೆಲೆ- ಉದ್ಯೋಗ ಮೇಳ- ಕೌಶಲ್ಯ ತರಬೇತಿ ಕಾರ್ಯಕ್ರಮದಲ್ಲಿ ದಿಂಗಾಲೇಶ್ವರ ಶ್ರೀಗಳು

# ಮಹಿಳೆ ಮನಸ್ಸು ಮಾಡಿದರೆ ಯಶಸ್ವಿ ಜೀವನ ಸಾಧ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ಸ್ವತಃ ತಯಾರಿಸಿದ ವಸ್ತುಗಳ ಮಾರಾಟಕ್ಕೆ ತರಬೇತಿ ಅಗತ್ಯವಾಗಿದ್ದು, ಮಹಿಳೆ ಮನಸ್ಸು ಮಾಡಿದರೆ ಯಶಸ್ವಿ ಜೀವನ ಸಾಧ್ಯ ಎಂದು ಶಿರಹಟ್ಟಿ ಫಕ್ಕೀರೇಶ್ವರಮಠದ ದಿಂಗಾಲೇಶ್ವರ ಶ್ರೀಗಳು ಹೇಳಿದರು.

ಪಟ್ಟಣದ ಆರ್‌ಜಿಎಸ್ ಶಿಕ್ಷಣ ಸಂಸ್ಥೆ ಆವರಣದಲ್ಲಿ ಎಸ್.ಆರ್. ಪಾಟೀಲ ಫೌಂಡೇಶನ್‌ರವರು ಶಾಸಕ ಜಿ.ಎಸ್. ಪಾಟೀಲರವರ 78ನೇ ಹುಟ್ಟು ಹಬ್ಬದ ನಿಮಿತ್ತ ಹಮ್ಮಿಕೊಂಡಿದ್ದ ಉದ್ಯೋಗ ಮೇಳ ಮತ್ತು ಕೌಶಲ್ಯ ತರಬೇತಿ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಶ್ರೀಗಳು, ಇಂದಿನ ದಿನದಲ್ಲಿ ಮಹಿಳೆ ಸಹ ಶೈಕ್ಷಣಿಕ ಸೇರಿದಂತೆ ರಾಜಕೀಯ ರಂಗದಲ್ಲಿಯೂ ಸಾಧನೆ ಮೆರೆದಿದ್ದಾರೆ. ಅನೇಕ ರಾಜ್ಯಗಳಲ್ಲಿ ಮಹಿಳೆಯರು ವ್ುುಖ್ಯವ್ಂತ್ರಿಗ್ಳಾಗಿ ತಮ್ಮ ಕಾರ್ಯವನ್ನು ನಿಭಾಯಿಸುತ್ತಿದ್ದಾರೆ. ಮಹಿಳೆ ಶಕ್ತಿವಂತಳಾದರೆ ಇಂದಿರಾ ಗಾಂಧಿ ತರ ದೇಶದ ಪ್ರಧಾನಿಯಾಗಬಲ್ಲಳು ಎಂಬುದು ಇತಿಹಾಸ ತಿಳಿಸಿಕೊಟ್ಟಿದೆ. ಹೀಗಾಗಿ ಮಹಿಳೆ ಅಬಲೆ ಅಲ್ಲ ಸಬಲೆ ಎನ್ನುವುದನ್ನು ಅರಿಯಬೇಕಿದೆ ಎಂದರು. ಮಹಿಳೆ ಹೊರಗಡೆ ಬಂದು ದುಡಿಯಬೇಕು ಅಂತಲ್ಲ, ಬದಲಾಗಿ ಮನೆಯಲ್ಲಿ ಕುಳಿತುಕೊಂಡು ಆದಾಯ ವೃದ್ಧಿ ಮಾಡುವ ಚಾಕಚಕ್ಯತೆಯನ್ನು ಹೊಂದಬೇಕು.

ಅನೇಕ ಮಹಿಳೆಯರು ರುಚಿಯಾದ ಅಡುಗೆ ಮಾಡುವ ಕಲೆಯನ್ನು ಹೊಂದಿರುತ್ತಾರೆ, ಅಂತಹ ಮಹಿಳೆಯರು ಕೆಲ ಸರ್ಕಾರಿ ಕಚೇರಿಗಳಿಗೆ ಅಥವಾ ಖಾಸಗಿ ಕಂಪನಿಗಳಿಗೆ ನಿತ್ಯ ಊಟ ಸರಬರಾಜು ಮಾಡುವ ಬುಕಿಂಗ್ ವ್ಯವಸ್ಥೆ ಮಾಡಿಕೊಳ್ಳಬೇಕು, ಇದರಿಂದ ಕುಟುಂಬದ ಆರ್ಥಿಕ ಶಕ್ತಿ ಸುಧಾರಣೆಯಾಗುತ್ತದೆ. ಕುಟುಂಬದ ಇತರ ಸದಸ್ಯರನ್ನು ಸಹ ಈ ಕಾರ್ಯಕ್ಕೆ ಬಳಕೆ ಮಾಡಿಕೊಳ್ಳಬೇಕು ಎಂದರು. ಚಿತ್ರನಟಿ ಕಾರುಣ್ಯ ರಾಮ ಮಾತನಾಡಿ, ಕಷ್ಟಗಳು ಬಂದಾಗ ಮಾತ್ರ ಜೀವನದ ಗುಣಮಟ್ಟದ ಸುಧಾರಣೆಯಾಗಲು ಸಾಧ್ಯ. ಕಷ್ಟಗಳು ಬರುತ್ತಿವೆ ಎಂದು ಭಯ ಪಡುವ ಬದಲು ನಾನು ಯಾವುದರಲ್ಲಿ ಪ್ರತಿಭೆಯನ್ನು ಇಟ್ಟುಕೊಂಡಿದ್ದೇನೆ ಎಂಬುದನ್ನು ಅರಿತು ಆ ಪ್ರತಿಭೆಯನ್ನು ಹೊರತರುವ ಕೆಲಸವನ್ನು ನಾವೇ ಮಾಡಿಕೊಳ್ಳಬೇಕು. ಆಗ ಮಾತ್ರ ವೇದಿಕೆಗಳು ನಮಗೆ ಸಿಗತೊಡಗುತ್ತವೆ. 100ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಬಂದಿದ್ದು, ನೀವು ಹೊಂದಿರುವ ಶಿಕ್ಷಣಕ್ಕೆ ತಕ್ಕಂತೆ ಉದ್ಯೋಗ ನೀಡಲಿದ್ದು ಸದ್ಬಳಕೆ ಮಾಡಿಕೊಳ್ಳಿ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಐ.ಎಸ್. ಪಾಟೀಲ, ಸಂಗನಗೌಡ ಪಾಟೀಲ, ಅಕ್ಷಯ ಪಾಟೀಲ, ವೀರಣ್ಣ ಶೆಟ್ಟರ, ಶಿದ್ದಣ್ಣ ಬಂಡಿ, ವಿ.ಬಿ. ಸೋಮನಕಟ್ಟಿಮಠ, ಯೂಸುಫ್ ಇಟಗಿ, ಮಹೇಶ ಕಳಸಣ್ಣವರ, ಮಂಜುಳಾ ಹುಲ್ಲಣ್ಣವರ, ನಾಜಬೇಗಂ ಯಲಿಗಾರ, ಭವ್ಯಾ ಸೇರಿದಂತೆ ಎಂಎನ್‌ಸಿ ಕಂಪನಿಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

> "ನಾವು ಮಾಡುವ ಕೆಲಸಗಳನ್ನು ಸಣ್ಣದು ದೊಡ್ಡದು ಎಂಬ ಭಾವನೆಗಳಿಂದ ನೋಡಬಾರದು. ಸಿಕ್ಕ ಕೆಲಸವನ್ನು ಪ್ರಾಮಾಣಿಕವಾಗಿ ಮಾಡುವ ಕಲೆಯನ್ನು ಬೆಳೆಸಿಕೊಳ್ಳಬೇಕು. ಸಣ್ಣ ಕೆಲಸ ಮುಂದಿನ ದಿನಗಳಲ್ಲಿ ಹೆಮ್ಮರವಾಗಿ ಬೆಳೆದು ನಿಲ್ಲಬಹುದು. ಮಹಿಳೆ ಸಾಧನೆ ಮಾಡಲು ಹೊರಟರೆ ಅಸಾಧ್ಯ ಎನ್ನುವ ಪದವೇ ಹಿಂದೆ ಸರಿಯಲಿದ್ದು, ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಕೊಳ್ಳುವ ಜೊತೆಗೆ ಸ್ವ ಉದ್ಯೋಗ ಹೊಂದಿದಾಗ ಆರ್ಥಿಕ ಬಲವರ್ಧನೆಗೆ ಸಹಕಾರಿಯಾಗಲಿದೆ."
>
> – **ದಿಂಗಾಲೇಶ್ವರ ಶ್ರೀಗಳು,** ಶಿರಹಟ್ಟಿ ಶ್ರೀಮಠ.

ಕಳೆದ ವರ್ಷ ಅಲ್ಪ ಏರಿಕೆ ಕಂಡಿದ್ದ ಫಲಿತಾಂಶ ಮತ್ತೆ ಕುಸಿತ- ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಗದಗ ಜಿಲ್ಲೆಗೆ 30ನೇ ಸ್ಥಾನ

# ಮತ್ತೆ ಕುಸಿದ ಪಿಯು ಫಲಿತಾಂಶ: ಗದಗ ಜಿಲ್ಲೆಗೆ ಹಿನ್ನಡೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟವಾಗಿದ್ದು, ಗದಗ ಜಿಲ್ಲೆ ಈ ಬಾರಿ ಮತ್ತೊಮ್ಮೆ ಹಿನ್ನಡೆಯನ್ನು ಅನುಭವಿಸಿದೆ. ಕಳೆದ ವರ್ಷ ಅಲ್ಪ ಮಟ್ಟಿನ ಏರಿಕೆ ಕಂಡಿದ್ದ ಫಲಿತಾಂಶ, ಈ ಬಾರಿ ಮತ್ತೆ ಕುಸಿತ ಕಂಡಿರುವುದು ಜಿಲ್ಲೆಯ ಶೈಕ್ಷಣಿಕ ವ್ಯವಸ್ಥೆಯ ಕುರಿತು ಪ್ರಶ್ನೆಗಳು ಮೂಡುವಂತೆ ಮಾಡಿದೆ.



2024ರಲ್ಲಿ ರಾಜ್ಯದಲ್ಲೇ ಕೊನೆಯ ಸ್ಥಾನದಲ್ಲಿದ್ದ ಗದಗ ಜಿಲ್ಲೆ, 2025ರಲ್ಲಿ 25ನೇ ಸ್ಥಾನಕ್ಕೆ ಏರಿಕೆಯಾಗಿ ನಿರೀಕ್ಷೆ ಹುಟ್ಟಿಸಿತ್ತು. ಆದರೆ 2026ರಲ್ಲಿ ಮತ್ತೆ 30ನೇ ಸ್ಥಾನಕ್ಕೆ ಜಾರುವ ಮೂಲಕ, ಜಿಲ್ಲೆ ತನ್ನ ಪ್ರದರ್ಶನವನ್ನು ಸ್ಥಿರಗೊಳಿಸಲು ವಿಫಲವಾಗಿದೆ.

ಇದ್ರಲ್ಲೂ ಗಮನಾರ್ಹ ವಿಷಯವೆಂದರೆ, ಈ ಬಾರಿ ಜಿಲ್ಲೆಯಲ್ಲಿ ಶೇಕಡಾವಾರು ಉತ್ತೀರ್ಣತೆ ಶೇ. 76.65 ದಾಖಲಾಗಿದ್ದು, ಕಳೆದ ವರ್ಷದ ಶೇ. 66.64 ಕ್ಕಿಂತ ಹೆಚ್ಚಾಗಿದೆ. ಆದಾಗ್ಯೂ, ರಾಜ್ಯದ ಇತರೆ ಜಿಲ್ಲೆಗಳ ಉತ್ತಮ ಸಾಧನೆಯ ಹಿನ್ನೆಲೆ ಗದಗ ಜಿಲ್ಲೆಯ ರ‍್ಯಾಂಕಿಂಗ್ ಕುಸಿತ ಕಂಡಿದೆ. ರಾಜ್ಯಮಟ್ಟದ ಒಟ್ಟಾರೆ ಉತ್ತೀರ್ಣ ಪ್ರಮಾಣ ಏರಿಕೆಯಾದುದು ಮಾತ್ರ ಸ್ವಲ್ಪ ಸಮಾಧಾನ ತಂದಿದೆ.

**ಕಳೆದ ನಾಲ್ಕು ವರ್ಷದ ಪಿಯು ಫಲಿತಾಂಶ**

| | ವರ್ಷ | ಶೇಕಡಾ | ರಾಜ್ಯಮಟ್ಟದಲ್ಲಿ ಸ್ಥಾನ |
|---|---|---|---|
| *) | 2025–26 | 76.65% | 30 |
| *) | 2024–25 | 66.64% | 25 |
| *) | 2023–24 | 72.86% | 32 |
| *) | 2022–23 | 66.91% | 30 |

> "ಈ ಬಾರಿ ಶೇಕಡಾವಾರು ಉತ್ತೀರ್ಣತೆ ಏರಿಕೆಯಾದರೂ, ರಾಜ್ಯಮಟ್ಟದ ರ‍್ಯಾಂಕಿಂಗ್‌ನಲ್ಲಿ ಗದಗ ಜಿಲ್ಲೆ ಕುಸಿತ ಕಂಡಿದೆ. ಫಲಿತಾಂಶ ಸುಧಾರಣೆಗೆ ಹಲವು ಕ್ರಮಗಳನ್ನು ಕೈಗೊಂಡಿದ್ದರೂ ನಿರೀಕ್ಷಿತ ಮಟ್ಟದ ಫಲಿತಾಂಶ ದೊರಕಿಲ್ಲ. ಈ ಬಗ್ಗೆ ಸಮಗ್ರ ಆತ್ಮಾವಲೋಕನ ನಡೆಸಲಾಗುತ್ತದೆ."
>
> – **ಎಸ್. ಬಿ. ಮಸನಾಯಕ,** ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಗದಗ.







# ಎ. 18ರಿಂದ ಜಂಗಮ ವಟುಗಳಿಗೆ ದೀಕ್ಷಾ ತರಬೇತಿ ಶಿಬಿರ ಆರಂಭ

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ನಂದಿಪುರದಲ್ಲಿರುವ ಶ್ರೀ ದೊಡ್ಡ ಬಸವೇಶ್ವರ ಸ್ವಾಮಿ ಪುಣ್ಯಕ್ಷೇತ್ರ ನಂದಿಪುರ ಮಠದಲ್ಲಿ, ಶ್ರೀ ಗುರು ಚರಂತಪ್ಪಜ್ಜ ಮಹಾಸ್ವಾಮಿಗಳ ಸಂಕಲ್ಪದ ಮೇರೆಗೆ ಪ್ರತಿವರ್ಷದಂತೆ ವೀರಶೈವ ಜಂಗಮ ವಟುಗಳಿಗಾಗಿ ದೀಕ್ಷಾ ತರಬೇತಿ ಮತ್ತು ಅಯ್ಯಾಚಾರ ಶಿಬಿರವನ್ನು ಉಚಿತವಾಗಿ ಆಯೋಜಿಸಲಾಗಿದೆ.

ಈ ಕುರಿತು ಸುಕ್ಷೇತ್ರ ನಂದಿಪುರ ಮಠದ ಡಾ. ಮಹೇಶ್ವರ ಸ್ವಾಮಿ ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದು, ಈ ಶಿಬಿರವು ಎಪ್ರಿಲ್ 18, 2026 ರಿಂದ ಎಪ್ರಿಲ್ 26, 2026ರವರೆಗೆ ನಡೆಯಲಿದ್ದು, ವೀರಶೈವ ಧರ್ಮದಲ್ಲಿ ಗರ್ಭದೀಕ್ಷೆಯಿಂದ ಅಂತ್ಯ ಸಂಸ್ಕಾರದವರೆಗಿನ ಷೋಡಶ ಸಂಸ್ಕಾರಗಳ ಕುರಿತು ತರಬೇತಿ ನೀಡಲಾಗುತ್ತದೆ.



ಎಪ್ರಿಲ್ 27, 2026ರಂದು ದೀಕ್ಷಾ ಕಾರ್ಯಕ್ರಮ ನೆರವೇರಲಿದೆ. ದೀಕ್ಷಾ ತರಬೇತಿ ಹಾಗೂ ದೀಕ್ಷೆ ಪಡೆಯಲು ಆಸಕ್ತರಾದ ಶಿಬಿರಾರ್ಥಿಗಳು ಎಪ್ರಿಲ್ 17, 2026 ಶುಕ್ರವಾರ ಸಂಜೆ 6.00 ಗಂಟೆಗೆ ಮಠದಲ್ಲಿ ಹಾಜರಿರಬೇಕು. ಶಿಬಿರ ಮುಗಿಯುವವರೆಗೂ ಮಠವನ್ನು ಬಿಟ್ಟು ಹೋಗುವಂತಿಲ್ಲ ಎಂದು ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: 98805 20236, 81474 25633.

# ಪ್ರಬಂಧ ಸ್ಪರ್ಧೆಯಲ್ಲಿ ಶಿವಲೀಲಾ ಸೋಮಗೊಂಡ ತಾಲೂಕಿಗೆ ಪ್ರಥಮ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗಜೇಂದ್ರಗಡ, ರೋಣ ತಾಲೂಕಾ ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಕಚೇರಿ ಆಶ್ರಯದಲ್ಲಿ ನಡೆದ ಆಧುನಿಕ ಭಾರತ ನಿರ್ಮಾಣದಲ್ಲಿ ಡಾ. ಬಿ. ಆರ್. ಅಂಬೇಡ್ಕರ್ ಅವರ ಪಾತ್ರ ಕುರಿತಾದ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢ ಶಾಲೆಯ ವಿದ್ಯಾರ್ಥಿನಿ ಶಿವಲೀಲಾ ಸೋಮಗೊಂಡ ಗಜೇಂದ್ರಗಡ ತಾಲೂಕಿಗೆ ಪ್ರಥಮ ಸ್ಥಾನ



ಪಡೆದಿದ್ದಾಳೆ ಎಂದು ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ತಿಳಿಸಿದ್ದಾರೆ.

# ಡಾ. ವೀರೇಶ ಹಿರೇಮಠಗೆ ಪಿಎಚ್.ಡಿ ಪ್ರದಾನ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕರ್ನಾಟಕ ವಿಶ್ವವಿದ್ಯಾಲಯವು ವಿಜ್ಞಾನ ಮತ್ತು ತಂತ್ರಜ್ಞಾನ ನಿಖಾಯದ ಭೌತಶಾಸ್ತ್ರ ಅಧ್ಯಯನ ವಿಭಾಗದ ಸಂಶೋಧನಾ ವಿದ್ಯಾರ್ಥಿ ಡಾ. ವೀರೇಶ ಗುರುಸಿದ್ದಯ್ಯ ಹಿರೇಮಠ ಅವರಿಗೆ ಪಿಎಚ್.ಡಿ ಪದವಿ ಪ್ರದಾನ ಮಾಡಿದ್ದು, ಅವರ ಮಹಾಪ್ರಬಂಧವು "ಸಿಂಥೆಸಿಸ್ ಮತ್ತು ಕ್ಯಾರಕ್ಟರೈಜೇಶನ್ ಆಫ್ ಸಮ್ ರೇರ್ ಅರ್ಥಡೊಪ್ಡ್ ಫೆರೆಟ್ ನ್ಯಾನೋಪಾರ್ಟಿಕಲ್ಸ್ ಫಾರ್ ಸೆನ್ಸರ್ ಅಪ್ಲಿಕೇಶನ್ಸ್" ಎಂಬ ಪ್ರಮುಖ ವಿಷಯವನ್ನು ಒಳಗೊಂಡಿದೆ.



ಡಾ. ವೀರೇಶ ಅವರು ಮಹಾಪ್ರಬಂಧವನ್ನು ನಡೆಸುವ ಸಂದರ್ಭದಲ್ಲಿ ಭೌತಶಾಸ್ತ್ರ ಪ್ರಾಧ್ಯಾಪಕ ಡಾ. ಜಿ.ಎಚ್. ಮಳಿಮಠ ಅವರ ಮಾರ್ಗದರ್ಶನವನ್ನು ಪಡೆದಿದ್ದರು. ಮಹಾಪ್ರಬಂಧದ ಸಮರ್ಥತೆ, ನವೀನತೆ ಮತ್ತು ಕಾರ್ಯಕ್ಷಮತೆ ವಿಶ್ವವಿದ್ಯಾಲಯದಿಂದ ಹೆಚ್ಚುವರಿ ಪ್ರಶಂಸೆಗೆ ಪಾತ್ರವಾಗಿದೆ.

ಪ್ರಸ್ತುತ ಡಾ. ವೀರೇಶ ಅವರು ಕೆಎಲ್‌ಇ ಸಂಸ್ಥೆಯ ಹುಬ್ಬಳ್ಳಿಯ ಪಿ.ಸಿ. ಜಾಬಿನ್ ವಿಜ್ಞಾನ ಮಹಾವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಸಾಧನೆಗೆ ಸಂಸ್ಥೆಯ ಚೇರ್ಮನ್ ಅಮೀತ ಕೋರೆ, ಕಾಲೇಜು ಪ್ರಾಚಾರ್ಯರು ಡಾ. ಸಂಧ್ಯಾ ಕುಲಕರ್ಣಿ, ಬಸಯ್ಯ ಬಳಗಾನೂರಮಠ ಮತ್ತು ಕಾಲೇಜಿನ ಸಿಬ್ಬಂದಿ, ವಿದ್ಯಾರ್ಥಿಗಳು ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿದ್ದಾರೆ.

# ಕಾವ್ಯದಿಂದ ಅರಿವು, ಸೇವೆಯಿಂದ ಸಾಧನೆ – ಭಾಗ್ಯಶ್ರೀ ಹಳ್ಳಿಕೇರಿಮಠ

## ಗ್ರಾಮದಿಂದ ಆರಂಭವಾದ ಪಯಣ ರಾಜ್ಯ ಪ್ರಶಸ್ತಿಯವರೆಗೆ

ಗ್ರಾಮೀಣ ಹಿನ್ನೆಲೆಯಲ್ಲಿಯೇ ಹುಟ್ಟಿ, ಸಿಕ್ಕ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಸಾಧನೆಯ ಶಿಖರ ತಲುಪಿದ ಮಹಿಳೆ ಭಾಗ್ಯಶ್ರೀ ಗವಿಶಿದ್ಧಯ್ಯ ಹಳ್ಳಿಕೇರಿಮಠ. ಬಡತನ ಸಾಧನೆಗೆ ಅಡ್ಡಿಯಾಗುವುದಿಲ್ಲ ಎಂಬುದಕ್ಕೆ ಅವರೇ ಸಾಕ್ಷಿ.

ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲೂಕಿನ ಸಂಕನೂರು ಗ್ರಾಮದಲ್ಲಿ 21–04–2001 ರಂದು ಸಿದ್ರಾಮಯ್ಯ ಮತ್ತು ಜಯಮ್ಮ ದಂಪತಿಯ ಪುತ್ರಿಯಾಗಿ ಜನಿಸಿದ ಅವರು, ಬಾಲ್ಯದಲ್ಲೇ ತಂದೆಯನ್ನು ಕಳೆದುಕೊಂಡರು. ನಂತರ ಹೊಸೂರು, ಬೇಲೂರು ಪ್ರದೇಶಗಳಲ್ಲಿ ಆಶ್ರಯ ಪಡೆದು ವಿದ್ಯಾಭ್ಯಾಸ ಮುಂದುವರಿಸಿ, ಪಿಯುಸಿ ವರೆಗೆ ಬಾದಾಮಿಯಲ್ಲಿ ಓದಿದರು. ಬಳಿಕ ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಜಂತಲಿ ಶಿರೂರು ಗ್ರಾಮದ ಜನಪದ ಕಲಾವಿದ ಗವಿಶಿದ್ಧಯ್ಯ ಹಳ್ಳಿಕೇರಿಮಠ ಅವರನ್ನು ವಿವಾಹವಾಗಿದ್ದು, ಕೃಷಿಯೊಂದಿಗೆ ಸಾಹಿತ್ಯ ಸೇವೆಗೆ ಮುಂದಾದರು.

ಕೊರೋನಾ ಮಹಾಮಾರಿ ಸಂದರ್ಭದಲ್ಲಿಯೂ ಪತಿಯೊಂದಿಗೆ ಆರೋಗ್ಯ ಜಾಗೃತಿ ಗೀತೆಗಳನ್ನು ರಚಿಸಿ ಮೊಬೈಲ್ ಮೂಲಕ ಹರಿಬಿಟ್ಟರು. ಈ ಜಾಗೃತಿ ಗೀತೆಗಳು ವಿವಿಧ ಭಾಷೆಗಳ




ಮಾಧ್ಯಮಗಳಲ್ಲಿ ಪ್ರಸಾರಗೊಂಡು ಜನರಲ್ಲಿ ಅರಿವು ಮೂಡಿಸಿದವು. ಸಾಮಾಜಿಕ ಜಾಲತಾಣಗಳ ಮೂಲಕ ಕಾವ್ಯ, ಲೇಖನಗಳ ಮೂಲಕವೂ ಜನರಿಗೆ ಆರೋಗ್ಯ ಸಂಕಲ್ಪಕ್ಕೆ ಕರೆ ನೀಡಿದರು.

ಭಾಗ್ಯಶ್ರೀ ಅವರ "ಅಕ್ಷರ ಭಾಗ್ಯ" ಕೃತಿ ವಿಶಿಷ್ಟವಾಗಿದೆ. ಕನ್ನಡದ ಪ್ರತಿಯೊಂದು ವರ್ಣಾಕ್ಷರದಿಂದ ಆರಂಭವಾಗಿ ಅದೇ ಅಕ್ಷರದಲ್ಲಿ ಅಂತ್ಯಗೊಳ್ಳುವ ಚುಟುಕು ಕಾವ್ಯಗಳ ಸಂಕಲನ ಇದಾಗಿದ್ದು, 2023ರಲ್ಲಿ ಕರ್ನಾಟಕ ಅಚೀವರ್ಸ್ ಬುಕ್ ಆಫ್ ರೆಕಾರ್ಡ್‌ಗೆ ಸೇರ್ಪಡೆಯಾಗಿದೆ.

ರಾಜ್ಯ ಹಾಗೂ ರಾಷ್ಟ್ರ ಮಟ್ಟದ ಅನೇಕ ಸಾಹಿತ್ಯ, ಸಾಂಸ್ಕೃತಿಕ ಸಮ್ಮೇಳನಗಳಲ್ಲಿ ಕಾವ್ಯ ವಾಚನ ಮಾಡಿ ಖ್ಯಾತಿ ಗಳಿಸಿದ್ದಾರೆ.



ಪೋಷಣ್ ಅಭಿಯಾನ, ಮಹಿಳಾ ಸಬಲೀಕರಣ, ಪರಿಸರ ಜಾಗೃತಿ, ಆರೋಗ್ಯ ಕಾರ್ಯಕ್ರಮಗಳು ಸೇರಿದಂತೆ ವಿವಿಧ ಸಾಮಾಜಿಕ ಚಟುವಟಿಕೆಗಳಲ್ಲಿ ಕಾವ್ಯದ ಮೂಲಕ ಅರಿವು ಮೂಡಿಸಿದ್ದಾರೆ.

2022ರಲ್ಲಿ "ಭಾಗ್ಯಶ್ರೀ ವಿವಿಧೋದ್ದೇಶಗಳ ಸೇವಾ ಸಂಸ್ಥೆ" ಸ್ಥಾಪಿಸಿ, ಸಾಧಕರ ಸನ್ಮಾನ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದಾರೆ. ಕನ್ನಡ ನಾಡು–ನುಡಿ ರಕ್ಷಣಾ ಹೋರಾಟಗಳಲ್ಲಿಯೂ ಕಾವ್ಯದ ಮೂಲಕ ಸಕ್ರಿಯವಾಗಿ ಭಾಗವಹಿಸಿದ್ದಾರೆ.

ನೇತ್ರದಾನ ಕುರಿತು ಜಾಗೃತಿ ಮೂಡಿಸುವ ಕಾವ್ಯ ರಚನೆ ಜೊತೆಗೆ ಸ್ವತಃ ಮರಣಾನಂತರ ನೇತ್ರದಾನಕ್ಕೆ ವಾಗ್ದಾನ ಮಾಡಿರುವುದು ಅವರ ಸಮಾಜಮುಖಿ ಮನೋಭಾವಕ್ಕೆ ಸಾಕ್ಷಿಯಾಗಿದೆ.

ಇವರ ಸಾಧನೆಯನ್ನು ಗುರುತಿಸಿ ನುಡಿ ಚೇತನ, ಕವಿ ಚೇತನ, ಸ್ತ್ರೀ ಶಕ್ತಿ ಸೇರಿದಂತೆ ಹಲವು ಪ್ರಶಸ್ತಿಗಳು ಲಭಿಸಿವೆ. 2026ನೇ ಸಾಲಿನ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಯನ್ನು ಕರ್ನಾಟಕ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಪ್ರದಾನ ಮಾಡಿರುವುದು ಅವರ ಬಹುಮುಖ ಸಾಧನೆಗೆ ಸಂದ ಗೌರವವಾಗಿದೆ.

**–ಎಂ. ಪ್ರಿಯದರ್ಶಿನಿ, ಕೊಪ್ಪಳ.**

# ಮಾಧ್ಯಮ ಯಾವತ್ತೂ ನೈಜ ಹೋರಾಟದ ಜತೆಗೆ ನಿಲ್ಲುತ್ತದೆ




**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

160ನೇ ದಿನದ ಬಲ್ಡೋಟ ಹಠಾವೋ ಧರಣಿ ವೇದಿಕೆಯಲ್ಲಿ ಮಾಧ್ಯಮ ಸಾಧಕರಿಗೆ ಗೌರವ ನೀಡಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಕಿನ್ನಾಳ ಯುವಕರು "ಕಿಕ್ ಔಟ್ ಬಲ್ಡೋಟ" ಹಾಗೂ ಕಾರ್ಖಾನೆಗಳು ಎನ್ನುವ ಹಳ್ಳಿಯ ಸಂತ್ರಸ್ತರ ಜೀವನ ಮತ್ತು ಪರಿಸರದ ಕಿರುಚಿತ್ರವನ್ನು ಪ್ರೊಜೆಕ್ಟರ್ ಮೂಲಕ ಪ್ರದರ್ಶಿಸಿದರು.

ಈ ಸಂದರ್ಭದಲ್ಲಿ ಕನ್ನಡ ಮಾಧ್ಯಮ ಅಕಾಡೆಮಿ ಪ್ರಜಾ ಸಂದೇಶ ದತ್ತಿ ಪ್ರಶಸ್ತಿ ಪಡೆದ ಟಿವಿ5 ವರದಿಗಾರ ನಾಗರಾಜ ವೈ. ಮಾತನಾಡಿ, "ಮಾಧ್ಯಮ ಮತ್ತು ಹೋರಾಟವು ಸಮಾಜದ ಬದಲಾವಣೆಗೆ ಒಂದೇ ದಾ–ರಿಯಾಗಿದೆ. ಅನ್ಯಾಯ ಕಂಡರೆ ಧ್ವನಿ ಇಲ್ಲದವರ ಧ್ವನಿಯಾಗಿ ಮಾಧ್ಯಮ ಹೋರಾಟವನ್ನು ಜನರಿಗೆ ತಲುಪಿಸುತ್ತದೆ. 160ನೇ ದಿನದ ಹೋರಾಟ ವೇದಿಕೆಯಲ್ಲಿ ಪ್ರಶಸ್ತಿ ಸ್ವೀಕರಿಸಲು ಹೆಮ್ಮೆ ಎನಿಸುತ್ತದೆ. ಈಗ 50% ಹೋರಾಟ ಯಶಸ್ವಿಯಾಗಿದೆ, ಉಳಿದ ಹಂತಕ್ಕೆ ಮಾಧ್ಯಮದ ಸಹಕಾರ ಬೇಕಾಗಿದೆ" ಎಂದರು.

ಸಾಮಾಜಿಕ/ಮಾನವೀಯ ಮಿಡಿತ ವರದಿಗೆ ರಾಜ್ಯಮಟ್ಟದ ಪ್ರಶಸ್ತಿ ಪಡೆದ ಪತ್ರಕರ್ತ ರಾಜು ಬಿ. ಆರ್. ಅವರು ಮಾತನಾಡಿ, "ಇಲ್ಲಿರುವ ಪ್ರತಿಯೊಬ್ಬ ಹೋರಾಟಗಾರರ ಶ್ರಮ ದೊಡ್ಡ ಹೋರಾಟ ರೂಪಿಸಿದೆ. ನಮ್ಮ ಲೇಖನ, ವರದಿ, ಪ್ರಶಸ್ತಿ ಎಲ್ಲಕ್ಕೂ ಮಿಗಿಲಾದುದು ಈ ವೇದಿಕೆಯ ಪ್ರಾಮಾಣಿಕ ಹೋರಾಟ. ಇಲ್ಲಿ ಸಿಕ್ಕ ಗೌರವ ನಿಜಕ್ಕೂ ಮಹತ್ವದ್ದಾಗಿದೆ" ಎಂದರು.

ಪ್ರಧಾನ ಸಂಚಾಲಕರಾದ ಅಲ್ಲಮಪ್ರಭು ಬೆಟ್ಟದೂರು ಮಾತನಾಡಿ, "ಹೋರಾಟವು ಮಾಧ್ಯಮದ ಸಹಕಾರದಿಂದ ಬೆಳೆದು ನಿಂತಿದೆ. ಕಿರುಚಿತ್ರ ಮಾಡುವ ಯುವಕರು ಮುಂದೆ ಹೆಚ್ಚು ಜಾಗೃತಿ ಮೂಡಿಸಿ, ಕೊಪ್ಪಳದ ಜನರ ಸೇವೆ ಮಾಡಲಿ" ಎಂದರು.

ವೇದಿಕೆಯಲ್ಲಿ ಮಲ್ಲಿಕಾರ್ಜುನ ಗೋನಾಳ, ಮಂಜುನಾಥ ಜಿ. ಗೊಂಡಬಾಳ, ಜ್ಯೋತಿ ಎಂ. ಗೊಂಡಬಾಳ, ಸರೋಜಾ ಬಾಕಳೆ ಮಾತನಾಡಿ ತಮ್ಮ ಬೆಂಬಲ ವ್ಯಕ್ತಪಡಿಸಿದರು.

ಧರಣಿಯಲ್ಲಿ ಕಾವ್ಯಾ ಗಡಾದ, ವಿದ್ಯಾ ನಾಲ್ವಾಡ, ಪ್ರಕಾಶಕಿ ಮಾಲಾ ಬಡಿಗೇರ, ಕಿರುಚಿತ್ರ ನಟಿ ಪ್ರಿಯಾಂಕಾ ಕಿನ್ನಾಳ, ಇಂಜಿನೀಯರ್ ಅನುರಾಧಾ, ನಿರ್ದೇಶಕ ಸಲ್ಮಾನ್ ಖಾನ್ ಕಿನ್ನಾಳ, ನಟ ಹನುಮೇಶ ಕಿನ್ನಾಳ, ಚಲನಚಿತ್ರ ನಿರ್ದೇಶಕ ರಮೇಶ ಸುರ್ವೆ, ಪ್ರಕಾಶಕ ಡಿ.ಎಂ. ಬಡಿಗೇರ, ನಿವೃತ್ತ ಪ್ರಾಚಾರ್ಯ ಬಿ.ಜಿ. ಕರಿಗಾರ, ಎಲ್.ಎಫ್. ಪಾಟೀಲ್, ಶರಣು ಶೆಟ್ಟರ್, ರಾಘವೇಂದ್ರ ನೇಕಾರ, ಶಾಂತಯ್ಯ ಅಂಗಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ಮನಶಾಂತಿಗೆ ಸಂಗೀತ- ವ್ಯಾಯಾಮ ಅವಶ್ಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಹೆಚ್ಚುತ್ತಿರುವ ಒತ್ತಡಕ್ಕೆ ಒಳಗಾಗುತ್ತಿದ್ದು, ಇಂತಹ ಸಂದರ್ಭಗಳಲ್ಲಿ ಸಂಗೀತ ಮತ್ತು ನಗು ವ್ಯಾಯಾಮವು ಮನಸ್ಸಿಗೆ ಶಾಂತಿ ನೀಡುವುದರ ಜೊತೆಗೆ ಆರೋಗ್ಯವನ್ನು ಉತ್ತಮಗೊಳಿಸುವಲ್ಲಿ ಮಹತ್ವದ ಪಾತ್ರವಹಿಸುತ್ತದೆ ಎಂದು ಇತಿಹಾಸ ಪ್ರಾಧ್ಯಾಪಕ ಮತ್ತು ಎನ್.ಎಸ್.ಎಸ್. ಘಟಕದ ಸಂಯೋಜಕ ಡಾ. ಅಪ್ಪಣ್ಣ ಹಂಜೆ ಹೇಳಿದರು.

ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಶ್ವ ಆರೋಗ್ಯ ದಿನಾಚರಣೆ–07 ನಿಮಿತ್ತ ಆಯೋಜಿಸಿದ್ದ ಒತ್ತಡರಹಿತ ಕ್ಯಾಂಪಸ್ ನಲ್ಲಿ ಅವರು ಮಾತನಾಡಿದರು.

ಇದೇ ವೇಳೆ ಸಂಗೀತ ಮತ್ತು ನಗು ವ್ಯಾಯಾಮ ಕಾರ್ಯಕ್ರಮದಲ್ಲಿ ವಿವಿಧ ನಗು ವ್ಯಾಯಾಮಗಳನ್ನು ನಡೆಸಿಕೊಟ್ಟು ವಿದ್ಯಾರ್ಥಿಗಳಲ್ಲಿ ಉತ್ಸಾಹ ಮತ್ತು ಹರ್ಷವನ್ನು ತುಂಬಿದರು.

ವಾಣಿಜ್ಯಶಾಸ್ತ್ರ ಪ್ರಾಧ್ಯಾಪಕ ಡಾ. ಲಕ್ಷ್ಮಣ ಮುಳಗುಂದ ಮಾತನಾಡಿ, ವೇಗದ ಜೀವನದಲ್ಲಿ ಒತ್ತಡವು ಸಾಮಾನ್ಯ ಸಮಸ್ಯೆಯಾಗಿದ್ದು ಇದನ್ನು ನಿವಾರಿಸಲು ಹಾಸ್ಯ ಮತ್ತು ನಗು ಅತ್ಯುತ್ತಮ ಔಷಧವಾಗಿದೆ. ಹಾಸ್ಯ ಚುಟುಕುಗಳು ಮನಸ್ಸನ್ನು ಹಗುರಗೊಳಿಸಿ ಚಿಂತೆಯನ್ನು ಕಡಿಮೆ ಮಾಡುತ್ತವೆ. ನಗುವಿನ ಮೂಲಕ ದೇಹದಲ್ಲಿ ಸಕಾರಾತ್ಮಕ ಹಾರ್ಮೋನುಗಳು ಬಿಡುಗಡೆಯಾಗಿ ಆರೋಗ್ಯ ಸುಧಾರಿಸುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಸಂಯೋಜಕಿ ಸಾವಿತ್ರಿ ಟಿ. ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ವೈದ್ಯರು ಮತ್ತು ತಜ್ಞರು ಪ್ರತಿದಿನ ಸ್ವಲ್ಪ ಸಮಯ ನಗುವಿಗೆ ಮೀಸಲಿಡಬೇಕೆಂದು ಸಲಹೆ ನೀಡುತ್ತಾರೆ. ಸ್ನೇಹಿತರೊಂದಿಗೆ ಹಾಸ್ಯ ಚುಟುಕುಗಳನ್ನು ಹಂಚಿಕೊಳ್ಳುವುದು ಮತ್ತು ನಗು ವ್ಯಾಯಾಮಗಳಲ್ಲಿ ಭಾಗವಹಿಸುವುದು ಹಾಗೂ ಮನಸ್ಸಿಗೆ ಸಂತೋಷ ನೀಡುವ ಚಟುವಟಿಕೆಗಳನ್ನು ಅನುಸರಿಸುವುದರಿಂದ ಒತ್ತಡವನ್ನು ಸುಲಭವಾಗಿ ಕಡಿಮೆ ಮಾಡಬಹು ಎಂದು ತಿಳಿಸಿದರು.ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.




# "ಜಗತ್ತನ್ನು ಯುದ್ಧದ ಬಾಗಿಲಿಗೆ ತಳ್ಳಿದ ಟ್ರಂಪ್"

## ಯುದ್ಧವಿರೋಧಿ ಕವಿಗೋಷ್ಠಿಯಲ್ಲಿ ಸಾಹಿತಿ ಬಿ. ಪೀರ್ ಬಾಷಾ ಅಭಿಪ್ರಾಯ




> "ರಾಜಕೀಯ ಪ್ರಜ್ಞೆ ಹೊಂದಿರುವ ಪ್ರತಿಯೊಬ್ಬರೂ ಜವಾಬ್ದಾರಿಯಿಂದ ದನಿಯೆತ್ತುವುದು ದೇಶ ಉಳಿಸುವಲ್ಲಿ ಅತ್ಯಂತ ಮುಖ್ಯ."
>
> **–ಬಿ. ಪೀರ್ ಬಾಷಾ,** ಸಾಹಿತಿ.

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

"ಪ್ರಭುತ್ವವು ಸದಾ ಜನತೆಯ ನಾಡಿಮಿಡಿತವನ್ನು ಅರಿಯುವ ಕೆಲಸ ಮಾಡಬೇಕು. ಜನಜೀವನ ಅಸ್ತವ್ಯಸ್ತವಾಗುವಂತಹ ನಿರ್ಧಾರಗಳು ಸಂಘರ್ಷಕ್ಕೆ ದಾರಿ ಮಾಡಿಕೊಡುತ್ತವೆ.

ಹಸಿದವರೆದುರು ಸಿದ್ಧಾಂತ ಬೋಧಿಸುವುದರಿಂದ ಪ್ರಯೋಜನವಿಲ್ಲ. ಜಗತ್ತಿನ ದೊಡ್ಡಣ್ಣ ಎನ್ನಿಸಿಕೊಂಡಿರುವ ಟ್ರಂಪ್ ಜಗತ್ತನ್ನೇ ಯುದ್ಧದ ಬಾಗಿಲಿಗೆ ತಂದು ನಿಲ್ಲಿಸಿದ್ದಾನೆ" ಎಂದು ಹೊಸಪೇಟೆಯ ಖ್ಯಾತ ಕವಿ, ಪ್ರಗತಿಪರ ಚಿಂತಕ ಹಾಗೂ ವಿಜಯನಗರ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಬಿ. ಪೀರ್ ಬಾಷಾ ಹೇಳಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ "ಎದ್ದೇಳು ಕರ್ನಾಟಕ ವೇದಿಕೆ" ಹಾಗೂ "ಬಂಡಾಯ ಸಾಹಿತ್ಯ ಸಂಘಟನೆ" ತಾಲೂಕು ಘಟಕಗಳ ಸಂಯುಕ್ತ ಆಶ್ರಯದಲ್ಲಿ ನಡೆದ ಯುದ್ಧವಿರೋಧಿ ಕವಿಗೋಷ್ಠಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆಡಳಿತಗಾರರ ತೀರ್ಮಾನಗಳು ಸಾಮಾನ್ಯ ಜನರ ಬದುಕಿಗೆ ತೊಂದರೆ ಉಂಟುಮಾಡುತ್ತವೆ. ಜನಪರ ಚಿಂತನೆಗಳಲ್ಲಿ ಪ್ರಭುತ್ವ ಹಲವು ಬಾರಿ ಹಿಂದೆ ಬೀಳುತ್ತದೆ. ಇಂದಿನ ಪರಿಸ್ಥಿತಿಯಲ್ಲಿ ದೇಶದ ಪ್ರಮುಖ ನಿರ್ಧಾರಗಳ ಮೇಲೂ ಹೊರದೇಶದ ಪ್ರಭಾವ ಹೆಚ್ಚುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿದ್ದ ಕವಯಿತ್ರಿ ಸುಧಾ ಚಿದಾನಂದಗೌಡ ಮಾತನಾಡಿ, "ಯುದ್ಧದ ನೇರ ಪರಿಣಾಮ ಕುಟುಂಬಗಳ ಮೇಲೇ ಬೀಳುತ್ತದೆ. ತಾಯಿ, ಪತ್ನಿ, ಮಕ್ಕಳು ಯುದ್ಧದ ಬಲಿಪಶುಗಳಾಗುತ್ತಾರೆ. ಕವಿಗಳು ಯುದ್ಧವಿರೋಧಿ ಧ್ವನಿಯನ್ನು ಎತ್ತುವುದು ಅತ್ಯಂತ ಅಗತ್ಯ" ಎಂದು ಹೇಳಿದರು.

ಈ ಸಂದರ್ಭದಲ್ಲಿ ಬ್ರೆಕ್ಟ್ ಅವರ ಯುದ್ಧವಿರೋಧಿ ಕವನಗಳನ್ನು ಉಲ್ಲೇಖಿಸಿ ಯುದ್ಧದ ಕ್ರೌರ್ಯವನ್ನು ಚಿತ್ರಿಸಿದರು.

ಮುಖ್ಯ ಅತಿಥಿ ನಿರ್ಮಲಾ ಶಿವನಗುತ್ತಿ ಮಾತನಾಡಿ, "ಯುದ್ಧ ಮನೆಬಾಗಿಲಿಗೇ ತಲುಪಿದೆ. ಇದನ್ನು ಎದುರಿಸಲು ಜನತೆ ಹೈರಾಣಾಗುತ್ತಿದ್ದಾರೆ" ಎಂದರು.

ಚಿಂತಕ ಕುಮಾರ್ ಸಮತಲ ಅವರು ಮಾತನಾಡಿ, "ಜನರನ್ನು ನಾಗರಿಕರೆಂದು ರೂಪಿಸುವಲ್ಲಿ ಪ್ರಭುತ್ವವು ಕೆಲವೊಮ್ಮೆ ಕ್ರೂರ ನೀತಿಯನ್ನು ಅನುಸರಿಸುತ್ತದೆ. ಈ ಬಗ್ಗೆ ಯುವಜನತೆ ಜಾಗೃತರಾಗಬೇಕು" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಿರಿಯ ಕವಿ ಹುರುಕಡ್ಲಿ ಶಿವಕುಮಾರ, ಉಪ್ಪಾರ ಬಸಪ್ಪ ಸೇರಿದಂತೆ ಹಲವರು ಯುದ್ಧವಿರೋಧಿ ಕವನ ವಾಚಿಸಿದರು. ಮಂಜುನಾಥ ಗಂಡಿ, ಮೆಹಬೂಬ, ಕೊಟ್ರೇಶ್ ನಾಯಕ ಲಮಾಣಿ, ಅರುಣಾ ಕೊಟ್ರೇಶ್, ಗಂಗಾ ಕೊಟ್ಟೂರು, ವಿಶಾಲ್ ಮ್ಯಾಸರ್, ವಿನೋದ ಸರ್ದಾರ್ ಮತ್ತಿತರರು ಭಾಗವಹಿಸಿದರು.

ಕಾರ್ಯಕ್ರಮದ ಆರಂಭದಲ್ಲಿ ವಿಶಾಲ್ ಮ್ಯಾಸರ್ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿನೋದ ಸರ್ದಾರ್ ಕಾರ್ಯಕ್ರಮ ನಿರೂಪಿಸಿದರು.

# ಮಾಗಿಮಾವಿನಹಳ್ಳಿಯಲ್ಲಿ ಉಡುಸಲಮ್ಮ ದೇವಿ ಜಾತ್ರೆ ವೈಭವ

## ವಿಶೇಷ ಪೂಜೆ ಸಲ್ಲಿಸಿದ ಶಾಸಕ ಕೆ. ನೇಮಿರಾಜ ನಾಯ್ಕ



**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಮಾಗಿಮಾವಿನಹಳ್ಳಿ ಗ್ರಾಮದಲ್ಲಿ ಗ್ರಾಮ ದೇವತೆ ಶ್ರೀ ಉಡುಸಲಮ್ಮ ದೇವಿಯ ಜಾತ್ರಾ ಮಹೋತ್ಸವವನ್ನು ಭಕ್ತಿಭಾವದಿಂದ ಆಚರಿಸಲಾಯಿತು. ಈ ಪ್ರಯುಕ್ತ ಶಾಸಕ ಕೆ. ನೇಮಿರಾಜ ನಾಯ್ಕ ಅವರು ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು.

ನಂತರ ಮಾತನಾಡಿದ ಅವರು, ಗ್ರಾಮ ದೇವತೆಗಳ ಜಾತ್ರೆಗಳು ನಮ್ಮ ಸಂಸ್ಕೃತಿ ಮತ್ತು ಪರಂಪರೆಯ ಪ್ರತೀಕವಾಗಿದ್ದು, ಜನರಲ್ಲಿ ಐಕ್ಯತೆ ಹಾಗೂ ಭಕ್ತಿಯನ್ನು ಬಲಪಡಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದರು.

ಗ್ರಾಮದ ಅಭಿವೃದ್ಧಿಗೆ ಜನರ ಸಹಕಾರ ಅತ್ಯಗತ್ಯವಾಗಿದ್ದು, ಎಲ್ಲರೂ ಒಗ್ಗಟ್ಟಿನಿಂದ ಗ್ರಾಮವನ್ನು ಪ್ರಗತಿಯ ದಾರಿಗೆ ಕೊಂಡೊಯ್ಯಬೇಕು ಎಂದು ಕರೆ ನೀಡಿದರು.

ಜಾತ್ರೆಯಲ್ಲಿ ಸಾವಿರಾರು ಭಕ್ತರು ಭಾಗವಹಿಸಿ ದೇವಿಯ ದರ್ಶನ ಪಡೆದು ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಜೆಡಿಎಸ್ ತಾಲೂಕು ಅಧ್ಯಕ್ಷ ವೈ. ಮಲ್ಲಿಕಾರ್ಜುನ್, ಟಿ. ಸೂರ್ಯಬಾಬು, ಯು.ಕೆ. ಕೊಟ್ರೇಶ್, ವಿಶ್ವಕರ್ಮ ಸಮಾಜದ ಅಧ್ಯಕ್ಷ ಸಿದ್ದರಾಜು, ಬಾರಿಕರ ಮಹದೇವಪ್ಪ, ವರದಾಪುರ ಬಸವರಾಜ್, ಪಂಪಾಪತಿ ಗೌಡ್ರು, ಕುಪ್ಪನಕೇರಿ ಭೀಮಣ್ಣ, ಅಪ್ಪನಕೇರಿ ಮಂಜುನಾಥ್, ಕುರುಬರ ಬಸವರಾಜ್, ಹನುಮಂತ ನಾಯ್ಕ, ಗುರ್ಯ ನಾಯ್ಕ ಸೇರಿದಂತೆ ಗ್ರಾಮದ ಹಿರಿಯರು ಉಪಸ್ಥಿತರಿದ್ದರು.

# ಮಹಿಳೆಯರಿಗೆ ಆರೋಗ್ಯ-ನೈರ್ಮಲ್ಯ ಕುರಿತು ಜಾಗೃತಿ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ಎ 7ರಂದು ಎಸ್.ಎಸ್.ಕೆ. ಸಮಾಜದ ಮಹಿಳೆ ಹಾಗೂ ಯುವತಿಯರಿಗೆ ಆರೋಗ್ಯ, ಸ್ವಾಸ್ಥ್ಯ ಹಾಗೂ ನೈರ್ಮಲ್ಯ ಕುರಿತು ಕಾರ್ಯಕ್ರಮವನ್ನು ನಗರದ ಸರಾಫ್ ಬಜಾರ್ ಅಂಬಾಭವಾನಿ ದೇವಸ್ಥಾನದ ಹಿಂದಿರುವ ಹಾಲ್‌ನಲ್ಲಿ ಆಯೋಜಿಸಲಾಗಿತ್ತು. ಸಾಕಷ್ಟು ಮಹಿಳೆಯರು ಮತ್ತು ಯುವತಿಯರು ಕಾರ್ಯಕ್ರಮದಲ್ಲಿ ಭಾಗಿಯಾಗಿ ಉಪಯೋಗ ಪಡೆದುಕೊಂಡರು.

ಹೇಮಲತಾ ಭಜಂತ್ರಿ, ಪಿರಿಯಡ್ ಫೆಲೋ ಅನ್ ಇನ್‌ಹಿಬಿಟೆಡ್ ಸಂಸ್ಥೆ, ಆರ್. ಕೆ.ಎಸ್.ಕೆ. ರಾಷ್ಟ್ರೀಯ ಕಿಶೋರ ಸ್ವಾಸ್ಥ್ಯ ಕಾರ್ಯಕ್ರಮದ ಸಹಯೋಗದೊಂದಿಗೆ ಮಹಿಳೆಯರ ಮುಟ್ಟು, ಬಿಳಿಸ್ರಾವ, ಪಿಸಿಓಡಿ, ಪಿಸಿಓಎಸ್, ಥೈರಾಯಿಡ್ ಕಾಯಿಲೆ ಮತ್ತು ರಕ್ತಕೋಶ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಿದರು.

ಅನ್ ಇನ್‌ಹಿಬಿಟೆಡ್ ಸಂಸ್ಥೆಯ ಆಶಾ ಲಕ್ಷ್ಮಣ್ ಅವರು, ಹದಿ ಹರಿಯದ ಹುಡುಗಿಯರ ಮುಟ್ಟಿನ ಆರೋಗ್ಯ ಮತ್ತು ನೈರ್ಮಲ್ಯದ ಬಗ್ಗೆ ಮಾತನಾಡಿ, 18 ವರ್ಷದೊಳಗಿನ ಎಲ್ಲ ಯುವತಿಯರಿಗೆ ಮರುಬಳಕೆ ಮಾಡಬಹುದಾದ ಪ್ಯಾಡ್‌ಗಳನ್ನು ವಿತರಿಸಿದರು.

# ಸಾಹಿತ್ಯ-ಶಿಕ್ಷಣ-ಸಂಸ್ಕೃತಿ ಸಮಾಜದ ಸಮಗ್ರ ಅಭಿವೃದ್ಧಿಗೆ ಆಧಾರ

## ಗದಗ ಜಿಲ್ಲಾ ಪ್ರಥಮ ಸಾಹಿತ್ಯ-ಸಾಂಸ್ಕೃತಿಕ-ಶೈಕ್ಷಣಿಕ ಸಮಾವೇಶದಲ್ಲಿ ಸಂಕನೂರು ಅಭಿಮತ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿ ಸಾಹಿತ್ಯ, ಸಂಸ್ಕೃತಿ ಮತ್ತು ಶಿಕ್ಷಣದ ಸಮ್ಮಿಲನಕ್ಕೆ ಸಾಕ್ಷಿಯಾದ ಗದಗ ಜಿಲ್ಲಾ ಪ್ರಥಮ ಸಾಹಿತ್ಯ-ಸಾಂಸ್ಕೃತಿಕ-ಶೈಕ್ಷಣಿಕ ಸಮಾವೇಶವು ಭಾರೀ ಯಶಸ್ಸಿನೊಂದಿಗೆ ನೆರವೇರಿತು.

ಅಖಿಲ ಕರ್ನಾಟಕ ಸಾಂಸ್ಕೃತಿಕ ಪರಿಷತ್, ಬೆಂಗಳೂರು ಹಾಗೂ ಗದಗ ಜಿಲ್ಲಾ ಘಟಕದ ಆಶ್ರಯದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ವೃತ್ತಿಪರ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ಆಯೋಜಿಸಲಾದ ಈ ಸಮಾವೇಶವನ್ನು ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವಿ. ಸಂಕನೂರು ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಅವರು, ಸಾಹಿತ್ಯ, ಶಿಕ್ಷಣ ಮತ್ತು ಸಂಸ್ಕೃತಿಗಳು ಪರಸ್ಪರ ಅವಿಭಾಜ್ಯ ಸಂಬಂಧ ಹೊಂದಿದ್ದು, ಸಮಾಜದ ಸಮಗ್ರ ಅಭಿವೃದ್ಧಿಗೆ ಅವು ಪ್ರಮುಖ ಪಾತ್ರವಹಿಸುತ್ತವೆ ಎಂದು ಹೇಳಿದರು. ಸಾಹಿತ್ಯವು ಸಮಾಜದ ಪ್ರತಿಬಿಂಬವಾಗಿದ್ದು, ಇತಿಹಾಸ ಮತ್ತು ಪರಂಪರೆಯನ್ನು ಜೀವಂತವಾಗಿರಿಸುತ್ತದೆ ಎಂದು ಅಭಿಪ್ರಾಯಪಟ್ಟರು.



ಸಂಘಟನಾ ಸಂಚಾಲಕ ಪಾಂಡು ಚವ್ಹಾಣ ಮಾತನಾಡಿ, ಬಾಬು ಜಗಜೀವನ ರಾಮ ಅವರ ಜಯಂತಿ ಹಾಗೂ ಸಿದ್ದೇಶ್ವರ ಶ್ರೀಗಳಿಗೆ ನುಡಿನಮನ ಸಲ್ಲಿಸುವ ಉದ್ದೇಶದಿಂದ ಈ ಸಮಾವೇಶವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು. ಮಹಿಳಾ ಸಬಲೀಕರಣದ ಸಂದೇಶ ಸಾರುವ ಉದ್ದೇಶದಿಂದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನೂ ಕಾರ್ಯಕ್ರಮದ ಅಂಗವಾಗಿ ಆಚರಿಸಲಾಗಿದೆ ಎಂದರು.

ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಆರ್.ಎಸ್. ಬುರಡಿ ಮಹಿಳೆಯರ ಸಾಧನೆಗಳನ್ನು ಮೆಚ್ಚಿ, ಇಂದಿನ ಕಾಲದಲ್ಲಿ ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿಯೂ ಮುನ್ನಡೆಯುತ್ತಿರುವುದು ಸಂತಸದ ವಿಚಾರ ಎಂದು ಹೇಳಿದರು. ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ನಂದಾ ಹನಬರಟ್ಟಿ ಸಾಹಿತ್ಯವು ಸಂಸ್ಕೃತಿಯ ಸಂರಕ್ಷಣೆಗೆ ಪ್ರಮುಖ ಸಾಧನವಾಗಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ 'ಭಾವ ಬಿಂದು ಕಾವ್ಯ ಸಿಂಧು' ಕವನ ಸಂಕಲನವನ್ನು ಲೋಕಾರ್ಪಣೆ ಮಾಡಲಾಯಿತು. ಉಪನ್ಯಾಸಕರಾದ ಜಿ.ಎಫ್. ಕಾಯಕದ ಮಹಿಳಾ ಸಬಲೀಕರಣದ ಅಗತ್ಯತೆಯನ್ನು ಒತ್ತಿ ಹೇಳಿ, ಶಿಕ್ಷಣ ಮತ್ತು ಆತ್ಮಸ್ಥೈರ್ಯದಿಂದ ಮಹಿಳೆಯರು ತಮ್ಮ ಭವಿಷ್ಯವನ್ನು ರೂಪಿಸಬಹುದು ಎಂದು ಹೇಳಿದರು. ಈ ಸಮಾರಂಭದಲ್ಲಿ ರಾಜ್ಯ ಮಟ್ಟದ ಮಹಿಳಾ ಸಾಧಕರಿಗೆ 'ಮಹಿಳಾ ಸಾಧಕ ರತ್ನ' ಪ್ರಶಸ್ತಿ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರಿಗೆ 'ಸಾಂಸ್ಕೃತಿಕ ಸಿರಿ' ಪ್ರಶಸ್ತಿ ಪ್ರದಾನ ಮಾಡಲಾಯಿತು. ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ ಸದಸ್ಯ ಬಸವರಾಜ ಕಡೆಮನಿ, ಪ್ರೊ. ನೀಲು ರಾಠೋಡ, ಡಿ.ಎಂ. ಮ್ಯಾಗೇರಿ, ಸುಜಾತಾ ಪಾಟೀಲ, ಗೀತಾ ಸುಂಕದ, ಸುನೀಲ್ ಸಾತಿ, ಹೊನ್ನಪ್ಪ ಪೂಜಾರ, ಸುನೀಲ ಲಮಾಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮನೋರಮಾ ಪಿಯು ಕಾಲೇಜಿಗೆ 72% ಫಲಿತಾಂಶ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಸ್ವತಂತ್ರ ಪದವಿ ಪೂರ್ವ ಕಾಲೇಜು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ದಾಖಲಿಸಿ ಗಮನ ಸೆಳೆದಿದೆ. ಈ ಬಾರಿ ಕಾಲೇಜು ಒಟ್ಟು 72% ಫಲಿತಾಂಶ ಸಾಧಿಸಿದ್ದು, ವಿದ್ಯಾರ್ಥಿಗಳ ಸಾಧನೆಗೆ ಶಿಕ್ಷಣ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ.

ಪರೀಕ್ಷೆಯಲ್ಲಿ ಐಶ್ವರ್ಯ ಅವರು 94.33% ಅಂಕಗಳನ್ನು ಪಡೆದು ಪ್ರಥಮ ಸ್ಥಾನ ಗಳಿಸಿದ್ದರೆ, ವಿಜಯಲಕ್ಷ್ಮಿ ಪೋಲಿಸ್ ಪಾಟೀಲ 94% ಅಂಕಗಳೊಂದಿಗೆ ದ್ವಿತೀಯ ಸ್ಥಾನ ಪಡೆದಿದ್ದಾರೆ. ಚಿನ್ನು ಪೂಜಾರ 92.5% ಅಂಕಗಳೊಂದಿಗೆ ತೃತೀಯ ಸ್ಥಾನ ಗಳಿಸಿದ್ದರೆ, ಐಶ್ವರ್ಯ ಶಿದ್ಲಿಂಗ 89% ಅಂಕಗಳೊಂದಿಗೆ ನಾಲ್ಕನೇ ಸ್ಥಾನ ಪಡೆದಿದ್ದಾರೆ.

7 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್‌ನಲ್ಲಿ, 16 ವಿದ್ಯಾರ್ಥಿಗಳು ಪ್ರಥಮ ವರ್ಗದಲ್ಲಿ ಹಾಗೂ 13 ವಿದ್ಯಾರ್ಥಿಗಳು ದ್ವಿತೀಯ ವರ್ಗದಲ್ಲಿ ಉತ್ತೀರ್ಣರಾಗಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಯನ್ನು ಸಂಸ್ಥೆಯ ಅಧ್ಯಕ್ಷ ಎನ್. ಎಂ. ಕುಡತರಕರ, ಪ್ರಾಚಾರ್ಯ ಬಿ. ಎಸ್. ಹಿರೇಮಠ, ಕಾರ್ಯದರ್ಶಿ ಮಂಜುನಾಥ ಕುಡತರಕರ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ ಹಾಗೂ ಪಿಯುಸಿ ವಿಭಾಗದ ಸಂಯೋಜಕಿ ಶಾಹೀದಾ ಶಿರಹಟ್ಟಿ ಸೇರಿದಂತೆ ಸಿಬ್ಬಂದಿ ವರ್ಗ ಶ್ಲಾಘಿಸಿದ್ದಾರೆ.

# ಎ. 12ರಂದು ಪ್ರವೇಶ ಪರೀಕ್ಷೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಗದಗ, ರೋಣ ಹಾಗೂ ಮುಂಡರಗಿ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2026-27ನೇ ಸಾಲಿನ 6ನೇ ತರಗತಿ ದಾಖಲಾತಿಗಾಗಿ ಪ್ರವೇಶ ಪರೀಕ್ಷೆ ಎಪ್ರಿಲ್ 12, 2026ರಂದು ನಡೆಯಲಿದೆ.

ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳ ಪಾಲಕರ/ಪೋಷಕರ ದೂರವಾಣಿ ಸಂಖ್ಯೆಗೆ ವಿದ್ಯಾರ್ಥಿಯ ಹೆಸರು ಮತ್ತು ಪರೀಕ್ಷಾ ಕೇಂದ್ರದ ಮಾಹಿತಿಯನ್ನು ನಿರ್ದೇಶನಾಲಯ, ಬೆಂಗಳೂರು ವತಿಯಿಂದ ಕಳುಹಿಸಲಾಗಿದೆ. ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ತಮ್ಮ ಪ್ರವೇಶ ಪತ್ರವನ್ನು ಕೆಳಗಿನ ಜಾಲತಾಣದಿಂದ ಡೌನ್‌ಲೋಡ್ ಮಾಡಿಕೊಂಡು, ಅದರಲ್ಲಿ ಸೂಚಿಸಿರುವ ಪರೀಕ್ಷಾ ಕೇಂದ್ರಕ್ಕೆ ಕಡ್ಡಾಯವಾಗಿ ಹಾಜರಾಗಬೇಕು: https://erp.dom.karnataka.gov.in/adm/Admission/StudentHallticket ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

# ಮನೋರಮಾ ಪ್ರೀಮಿಯರ್ ಲೀಗ್ ಸೀಸನ್-2 ಭರ್ಜರಿ ಆರಂಭ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಪ್ರತಿಷ್ಠಿತ ಮನೋರಮಾ ಮಹಾವಿದ್ಯಾಲಯದಲ್ಲಿ ಪದವಿ ವಿದ್ಯಾರ್ಥಿಗಳಿಗಾಗಿ ಪ್ರತಿ ವರ್ಷದಂತೆ ಆಯೋಜಿಸಲಾದ ಮನೋರಮಾ ಪ್ರೀಮಿಯರ್ ಲೀಗ್ ಸೀಸನ್-2 ಕ್ರಿಕೆಟ್ ಪಂದ್ಯಾವಳಿ ಭರ್ಜರಿಯಾಗಿ ಆರಂಭಗೊಂಡಿತು. ಕ್ರೀಡಾ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವನೆ ಮತ್ತು ಒಗ್ಗಟ್ಟನ್ನು ಬೆಳೆಸುವ ಉದ್ದೇಶದಿಂದ ಈ ಪಂದ್ಯಾವಳಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಸಂಸ್ಥೆಯ ಚೇರ್ಮನ್ ಎನ್. ಎಂ. ಕುಡತರಕರ ಹಾಗೂ ಕಾರ್ಯದರ್ಶಿ ಮಂಜುನಾಥ ಕುಡತರಕರ ಅವರು ಕ್ರೀಡಾ ಮನೋಭಾವದ ಮಹತ್ವವನ್ನು ವಿವರಿಸಿದರು "ಆಟದಲ್ಲಿ ಸೋಲು-ಗೆಲುವು ಸಹಜ. ಆದರೆ ಪ್ರಾಮಾಣಿಕತೆಯಿಂದ, ನಿಯಮಗಳನ್ನು ಪಾಲಿಸಿಕೊಂಡು ಆಟವಾಡುವುದು ನಿಜವಾದ ಕ್ರೀಡಾಸ್ಫೂರ್ತಿ," ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಮಹಾವಿದ್ಯಾಲಯದ ಪ್ರಾಚಾರ್ಯರಾದ ಬಿ.ಎಸ್. ಹಿರೇಮಠ ಅವರು ಮಾತನಾಡಿ, ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ಭಾಗವಹಿಸಿ, ಕ್ರೀಡೆಯಲ್ಲಿ ತೊಡಗಿಸಿಕೊಂಡು ಉತ್ತಮ ಕ್ರೀಡಾಪಟುಗಳಾಗಬೇಕು ಎಂದು ಹಾರೈಸಿದರು. ಆಡಳಿತಾಧಿಕಾರಿ ಕಿಶೋರ ಮುದಗಲ್ ಅವರು ಕ್ರೀಡೆಗಳು ಮಾನವ ಜೀವನದಲ್ಲಿ ಅವಿಭಾಜ್ಯ ಅಂಗವಾಗಿದ್ದು, ಆರೋಗ್ಯಕರ ಜೀವನಕ್ಕೆ ಕ್ರೀಡಾ ಚಟುವಟಿಕೆಗಳು ರಾಜಮಾರ್ಗ ಎಂದು ಹೇಳಿದರು. ಮನೋರಮಾ ಪ್ರೀಮಿಯರ್ ಲೀಗ್ ಆಯೋಜನೆ ಸಂಸ್ಥೆಗೆ ಹೆಮ್ಮೆಯ ಸಂಗತಿ ಎಂದು ಅವರು ಸಂತಸ ವ್ಯಕ್ತಪಡಿಸಿದರು.

ದೈಹಿಕ ನಿರ್ದೇಶಕ ಖಯುಮ್ ನವಲೂರ ಅವರ ಮಾರ್ಗದರ್ಶನದಲ್ಲಿ ಪ್ರತಿ ತಂಡದಲ್ಲಿ ಆರು ವಿದ್ಯಾರ್ಥಿಗಳನ್ನು ಒಳಗೊಂಡಂತೆ ಒಟ್ಟು ಹತ್ತು ತಂಡಗಳನ್ನು ರಚಿಸಲಾಗಿದ್ದು, ಪ್ರತೀ ತಂಡಕ್ಕೂ ಕಾಲೇಜಿನ ಉಪನ್ಯಾಸಕರನ್ನು ನೇಮಿಸಲಾಗಿದೆ. ಪಂದ್ಯಾವಳಿಗೆ ಆದಿತ್ಯಾ ಜೋಶಿ ನಿರ್ಣಾಯಕರಾಗಿ ಕಾರ್ಯನಿರ್ವಹಿಸಿದರು. ಸಿಬ್ಬಂದಿ ವರ್ಗ ಹಾಗೂ ಉಪನ್ಯಾಸಕರು ಪಾಲ್ಗೊಂಡಿದ್ದರು.

# ಅಂಗನವಾಡಿಗಳಲ್ಲಿ ಸೌಕರ್ಯ ಕೊರತೆ: ತಕ್ಷಣ ಕ್ರಮಕ್ಕೆ ಮನವಿ

## ಮೂಲಸೌಕರ್ಯ ಒದಗಿಸಲು ವಿಕಾಸ ವೇದಿಕೆಯ ಒತ್ತಾಯ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಅಂಗನವಾಡಿ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವ ಬಗ್ಗೆ ಗದಗ ಜಿಲ್ಲಾ ವಿಕಾಸ ವೇದಿಕೆ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ನಿಸಾರ್ ಅಹಮದ್ ಅವರಿಗೆ ಮನವಿ ಸಲ್ಲಿಸಿದೆ.

ನಗರದ ಜಿಲ್ಲಾ ಆಸ್ಪತ್ರೆ ಪಕ್ಕದಲ್ಲಿರುವ ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಈ ಮನವಿ ಸಲ್ಲಿಸಲಾಯಿತು.

ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ಮಾತನಾಡಿ, ನಗರದ ಅನೇಕ ಅಂಗನವಾಡಿಗಳು ಬಾಡಿಗೆ ಕಟ್ಟಡಗಳಲ್ಲಿ ಹಾಗೂ ಸರ್ಕಾರಿ ಶಾಲೆಗಳಲ್ಲೇ ಕಾರ್ಯನಿರ್ವಹಿಸುತ್ತಿದ್ದು, ಅಗತ್ಯ ಮೂಲಸೌಕರ್ಯಗಳ ಕೊರತೆಯಿಂದ ಮಕ್ಕಳು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಹೇಳಿದರು. ಹಲವೆಡೆ ಆಟದ ಮೈದಾನ, ಶೌಚಾಲಯ ಸೇರಿದಂತೆ ಮೂಲಭೂತ ಸೌಲಭ್ಯಗಳಿಲ್ಲದೆ ಮಕ್ಕಳ ಶಿಕ್ಷಣ ಹಾಗೂ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ವಾರ್ಡ್ ನಂ. 26ರಲ್ಲಿ ತಗಡಿನ ಕಟ್ಟಡದಲ್ಲಿ ನಡೆಯುತ್ತಿರುವ ಅಂಗನವಾಡಿಗೆ ಸರಿಯಾದ ರಸ್ತೆ ಹಾಗೂ ಶೌಚಾಲಯ ವ್ಯವಸ್ಥೆಯಿಲ್ಲದೆ ಮಕ್ಕಳು ತೊಂದರೆ ಅನುಭವಿಸುತ್ತಿದ್ದಾರೆ. ಈ ಪ್ರದೇಶದಲ್ಲಿ ವೀರಶೈವ ಲೈಬ್ರರಿ ಸಮೀಪ ಸ್ವಂತ ಕಟ್ಟಡ ನಿರ್ಮಿಸಿದರೆ ಮಕ್ಕಳಿಗೆ ಅನುಕೂಲವಾಗಲಿದೆ ಎಂದು ಮನವಿ ಮಾಡಿದರು.

ಇದೇ ವೇಳೆ ಬಸವೇಶ್ವರ ನಗರದಲ್ಲಿರುವ ಅಂಗನವಾಡಿ ಕಟ್ಟಡಗಳು ಮಳೆಯ ಸಂದರ್ಭದಲ್ಲಿ ಸೋರಿಕೆಯಾಗುತ್ತಿದ್ದು, ತಕ್ಷಣ ದುರಸ್ತಿ ಹಾಗೂ ಮೂಲಸೌಕರ್ಯ ಒದಗಿಸಬೇಕೆಂದು ಒತ್ತಾಯಿಸಿದರು. ಶಾಲೆ ನಂ. 4ರ ಹತ್ತಿರ ಉದ್ಯಾನವನದ ಬಳಿಯಲ್ಲಿ ಶೌಚಾಲಯ ನಿರ್ಮಿಸಿದರೆ ಸಣ್ಣ ಮಕ್ಕಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ತಿಳಿಸಿದರು. ಅಂಗನವಾಡಿ ಕೇಂದ್ರಗಳು ಮಕ್ಕಳ ಮೊದಲ ಶಿಕ್ಷಣದ ನೆಲೆಗಳಾಗಿದ್ದು, ಅವುಗಳ ಗುಣಮಟ್ಟವನ್ನು ಹೆಚ್ಚಿಸುವುದು ಅತ್ಯಂತ ಅಗತ್ಯವಾಗಿದೆ. ಜಿಲ್ಲಾ ಆಡಳಿತ ಹಾಗೂ ಸಂಬಂಧಿತ ಇಲಾಖೆಗಳು ತಕ್ಷಣ ಗಮನಹರಿಸಿ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ತಿಳಿಸಲಾಗಿದೆ.

# ಎ. 14ರಂದು ಜಗಜೀವನರಾಂ-ಅಂಬೇಡ್ಕರ್ ಜಯಂತಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಂ ರವರ 119ನೇ ಜಯಂತಿ ಮತ್ತು ಸಂವಿಧಾನ ಶಿಲ್ಪಿ, ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ರವರ 135ನೇ ಜಯಂತಿಯನ್ನು ಎಪ್ರಿಲ್ 14ರಂದು ಆಚರಿಸಲಾಗುತ್ತಿದೆ. ಅಂದು ಬೆಳಿಗ್ಗೆ 9 ಗಂಟೆಗೆ ಇಬ್ಬರು ಮಹಾನ ನಾಯಕರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಶ್ರೀ ಜಗದ್ಗುರು ಫಕ್ಕೀರೇಶ್ವರ ಮಠದಿಂದ ಮೆರವಣಿಗೆಯನ್ನು ಪ್ರಾರಂಭಿಸಲಾಗುವುದು.

ಮೆರವಣಿಗೆ ಮಾರ್ಗವು ಗಾಂಧಿ ಸರ್ಕಲ್, ಬಸವೇಶ್ವರ ಸರ್ಕಲ್, ಸಂಗೊಳ್ಳಿ ರಾಯಣ್ಣ ಸರ್ಕಲ್, ಡಾ. ಬಿ.ಆರ್. ಅಂಬೇಡ್ಕರ್ ಸರ್ಕಲ್ ಹಾಗೂ ನೆಹರು ಸರ್ಕಲ್ ಮುಖಾಂತರ ಸಾಗಿಸಿ, ಅಂತಿಮವಾಗಿ ತಹಸೀಲ್ದಾರ್ ಕಚೇರಿ ಆವರಣ ತಲುಪಿದ ಮೇಲೆ ವೇದಿಕೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮಕ್ಕೆ ಎಲ್ಲಾ ಗಣ್ಯರು, ದಲಿತ ಸಂಘರ್ಷ ಸಮಿತಿಯ ಸದಸ್ಯರು, ಸಾರ್ವಜನಿಕರು, ಅಧಿಕಾರಿಗಳು, ಸಿಬ್ಬಂದಿ ವರ್ಗ ಹಾಜರಾಗಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಶಿರಹಟ್ಟಿ ತಹಸೀಲ್ದಾರ್ ಮನವಿ ಮಾಡಿದ್ದಾರೆ.

# ಇಂದು ಲೋಕಾಯುಕ್ತ ಸಾರ್ವಜನಿಕ ಜನಸಂಪರ್ಕ ಸಭೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ನಿರ್ದೇಶನದಂತೆ, ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಅವರ ಮಾರ್ಗದರ್ಶನದಲ್ಲಿ ಶಿರಹಟ್ಟಿಯ ತಹಸೀಲ್ದಾರ್ ಕಚೇರಿಯಲ್ಲಿ ಎಪ್ರಿಲ್ 10ರಂದು ಬೆಳಿಗ್ಗೆ 10.30 ಗಂಟೆಗೆ ಸಾರ್ವಜನಿಕ ಜನಸಂಪರ್ಕ ಸಭೆ ಜರುಗಲಿದೆ.

ಈ ಬಗ್ಗೆ ಮಾತನಾಡಿದ ಗದಗ ಲೋಕಾಯುಕ್ತ ಡಿಎಸ್ಪಿ ವಿಜಯಕುಮಾರ ಬಿರಾದಾರ್, ಸಾರ್ವಜನಿಕರು ಸರಕಾರಿ ಇಲಾಖೆಗಳಲ್ಲಿ ತಮ್ಮ ಕೆಲಸ-ಕಾರ್ಯದಲ್ಲಿ ವಿಳಂಬವಾಗುತ್ತಿದ್ದಲ್ಲಿ, ಲಂಚಕ್ಕೆ ಬೇಡಿಕೆ ಇಟ್ಟಿದ್ದಲ್ಲಿ, ವಿನಾಕಾರಣ ಸತಾಯಿಸುತ್ತಿದ್ದರೆ, ಸೇವೆಯಲ್ಲಿ ನಿರ್ಲಕ್ಷ್ಯ, ಕರ್ತವ್ಯ ಲೋಪ, ದುರಾಡಳಿತ ನಿರ್ವಹಿಸಿದಂತಹ ಅಧಿಕಾರಿ ವಿರುದ್ಧ ಫಾರ್ಮ್ ನಂ. 1 ಮತ್ತು 2 ರಲ್ಲಿ ಲಿಖಿತವಾಗಿ ದೂರನ್ನು ಸಲ್ಲಿಸಬಹುದಾಗಿದೆ ಎಂದು ತಿಳಿಸಿದರು,

ಆದ್ದರಿಂದ ಶಿರಹಟ್ಟಿ ತಾಲ್ಲೂಕಿನ ಎಲ್ಲ ತಾಲೂಕಾ ಮಟ್ಟದ ಅಧಿಕಾರಿಗಳು ಸಭೆಗೆ ಹಾಜರಾಗಬೇಕು. ಇದರಿಂದ ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಿ, ಸ್ಥಳದಲ್ಲಿಯೇ ಪರಿಹಾರವಾಗುವಂತಹ ಸಮಸ್ಯೆಗಳ ಇತ್ಯರ್ಥಕ್ಕೆ ಅನುಕೂಲವಾಗಲಿದೆ. ಆದ್ದರಿಂದ ಶಿರಹಟ್ಟಿ ಪಟ್ಟಣವೂ ಸೇರಿದಂತೆ ತಾಲ್ಲೂಕಿನ ವಿವಿಧ ಗ್ರಾಮೀಣ ಪ್ರದೇಶಗಳ ಸಾರ್ವಜನಿಕರು ಸಭೆಯ ಸದುಪಯೋಗವನ್ನು ಪಡಿಸಿಕೊಳ್ಳಬೇಕೆಂದು ತಿಳಿಸಿದರು.

## ಪ್ರತಿ ಕ್ವಿಂಟಾಲ್‌ಗೆ 6540; ರೈತರ ನೋಂದಣಿ 80 ದಿನ, ಖರೀದಿ ಅವಧಿ 90 ದಿನ

# ಎಫ್.ಎ.ಕ್ಯೂ ಗುಣಮಟ್ಟದ ಕುಸುಬೆ ಖರೀದಿಗೆ ಬೆಂಬಲ ಬೆಲೆ ನಿಗದಿ

■ವಿಜಯಸಾಕ್ಷಿ ಸುದ್ದಿ, ಗದಗ

2026ನೇ ಸಾಲಿನ ಹಿಂಗಾರು ಹಂಗಾಮಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ (FAQ) ಗುಣಮಟ್ಟದ ಕುಸುಬೆ ಹುಟ್ಟುವಳಿಯನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯ ಪ್ರತಿ ರೈತರಿಂದ ಪ್ರತಿ ಎಕರೆಗೆ 5 ಕ್ವಿಂಟಲ್‌ನಷ್ಟು ಗರಿಷ್ಠ 20 ಕ್ವಿಂಟಲ್ ಎಫ್‌ಎಕ್ಯೂ ಗುಣಮಟ್ಟದ ಕುಸುಬೆ ಖರೀದಿಸಲಾಗುತ್ತದೆ ಎಂದರು. ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಉತ್ಪನ್ನವನ್ನು ಖರೀದಿಸಬಾರದು ಹಾಗೂ ಯಾವುದೇ ದುರುಪಯೋಗವಾಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು. ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕಿ ಸುಧಾ ಆರ್. ಬಂಡಿ ಅವರು ಮಾತನಾಡಿ, ಎಫ್‌ಎಕ್ಯೂ ಗುಣಮಟ್ಟದ ಕುಸುಬೆ ಉತ್ಪನ್ನಕ್ಕೆ ಪ್ರತಿ ಕ್ವಿಂಟಾಲ್‌ಗೆ 6540 ಬೆಲೆ ನಿಗದಿಪಡಿಸಲಾಗಿದೆ ಎಂದರು. ಕೇಂದ್ರ ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಆದೇಶ ಹೊರಡಿಸಿದ ದಿನಾಂಕದಿಂದ ರೈತರ ನೋಂದಣಿ ಅವಧಿ 80 ದಿನಗಳವರೆಗೆ ಹಾಗೂ ಖರೀದಿ ಅವಧಿ 90 ದಿನಗಳವರೆಗೆ ಇರಲಿದೆ ಎಂದು ತಿಳಿಸಿದರು.




### ಖರೀದಿ ಕೇಂದ್ರಗಳ ವಿವರ

*) ಗದಗ ತಾಲ್ಲೂಕು: ಮುಳಗುಂದ, ಬಳಗಾನೂರು, ಹೊಂಬಳ
*) ನರಗುಂಡ: ಕಣಕಿಕೊಪ್ಪ
*) ಶಿರಹಟ್ಟಿ: ರಣತೂರು
*) ಲಕ್ಷ್ಮೇಶ್ವರ: ಶಿಗ್ಲಿ
*) ರೋಣ: ಅಬ್ಬಗೇರಿ
*) ಮಾಡಲಗೇರಿ: ಕಿಸಾನ್ ಅಭಿವೃದ್ಧಿ ತೋಟಗಾರಿಕೆ ರೈತ ಉತ್ಪಾದಕರ ಕಂಪನಿ
*) ಗಜೇಂದ್ರಗಡ: ಟಿಎಪಿಸಿಎಂಎಸ್ ನರಗಲ್, ನಿಡಗುಂದಿ
*) ನರಗಲ್: ನರೇಗಲ್ ರೈತ ಸಮೃದ್ಧಿ ತೋಟಗಾರಿಕಾ ಉತ್ಪಾದಕರ ಕಂಪನಿ
*) ಮುಂಡರಗಿ: ಬರದೂರ, ಪೇಠಲೂರು

ಖರೀದಿ ಪ್ರಕ್ರಿಯೆಯನ್ನು ಕೇಂದ್ರದ ಎನ್.ಸಿ.ಸಿ.ಎಫ್ ಹಾಗೂ ರಾಜ್ಯದ ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳಿ ನಿಯಮಿತ (ಕೆ.ಓ.ಎಫ್), ಬೆಂಗಳೂರು ಸಂಸ್ಥೆಗಳ ಮೂಲಕ ಜಾರಿಗೊಳಿಸಲಾಗುತ್ತದೆ ಎಂದು ಹೇಳಿದರು. ಸಭೆಯಲ್ಲಿ ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ಕಾನೂನು ಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಇಂದು 111 ಜಂಗಮರಿಂದ ಲೋಕನಾಥೇಶ್ವರನಿಗೆ ಏಕದಶ ಮಹಾರುದ್ರಾಭಿಷೇಕ

■ ವಿಜಯಸಾಕ್ಷಿ ಸುದ್ದಿ, ರೋಣ



ಪಟ್ಟಣದ ಪ್ರಸಿದ್ಧ ಲೋಕನಾಥೇಶ್ವರ ದೇವಸ್ಥಾನದಲ್ಲಿ ಶಾಸಕ ಜಿ.ಎಸ್. ಪಾಟೀಲರ 78ನೇ ಹುಟ್ಟುಹಬ್ಬದ ಅಂಗವಾಗಿ ಎಪ್ರಿಲ್ 10ರಂದು ಭವ್ಯ ಧಾರ್ಮಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಕುರಿತು ಜಂಗಮ ಸಮುದಾಯದ ಮುಖಂಡರು ಹಾಗೂ ಚುಟುಕು ಸಾಹಿತ್ಯ ಪರಿಷತ್ ಜಿಲ್ಲಾ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

111 ಜಂಗಮರಿಂದ ಏಕದಶ ಮಹಾರುದ್ರಾಭಿಷೇಕ ಬೆಳಿಗ್ಗೆ 5 ರಿಂದ 7.30ರವರೆಗೆ ಜರುಗಲಿದ್ದು, ಕಾಶಿ ಪಾಠಶಾಲೆಯ 11 ಪಂಡಿತರಿಂದ ಒಂದೇ ಧ್ವನಿಯಲ್ಲಿ ಮಂತ್ರಘೋಷಗಳು ಮೊಳಗಲಿರುವುದು ವಿಶೇಷವಾಗಿದೆ. ಶಾಸಕ ಜಿ.ಎಸ್. ಪಾಟೀಲರಿಗೆ ದೇವರ ಕೃಪೆಯಿಂದ ಮತ್ತಷ್ಟು ಶಕ್ತಿ, ಆಯುಷ್ಯ ದೊರಕಲಿ ಎಂಬ ಸಂಕಲ್ಪದೊಂದಿಗೆ ಈ ಧಾರ್ಮಿಕ ಕಾರ್ಯವನ್ನು ಆಯೋಜಿಸಲಾಗಿದೆ.

ಇದೇ ವೇಳೆ ಸಮಾಜಮುಖಿ ಚಟುವಟಿಕೆಗಳಿಗೆ ಹೆಸರಾದ ಶಾಸಕ ಪಾಟೀಲರ ಹುಟ್ಟುಹಬ್ಬದ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಎಪ್ರಿಲ್ 10ರಂದು ನಡೆಯಬೇಕಿದ್ದ ಚುಟುಕು ಸಾಹಿತ್ಯ ಸಂಭ್ರಮವನ್ನು, ಶಾಸಕ ಪಾಟೀಲರ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಎಪ್ರಿಲ್ 11ರಂದು ಬೆಳಿಗ್ಗೆ 11ಕ್ಕೆ ಪಟ್ಟಣದ ಗುರುಭವನದಲ್ಲಿ ನಡೆಸಲು ತೀರ್ಮಾನಿಸಲಾಗಿದೆ.

ಚುಟುಕು ಸಾಹಿತ್ಯದ ಅಭಿಮಾನಿಗಳು ಹಾಗೂ ಸಾರ್ವಜನಿಕರು ಎಪ್ರಿಲ್ 10 ಮತ್ತು 11ರಂದು ನಡೆಯುವ ಎಲ್ಲಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಸಾಹಿತ್ಯ ಮತ್ತು ಉದ್ಯೋಗ ಮೇಳದ ಪ್ರಯೋಜನ ಪಡೆಯಬೇಕು ಎಂದು ಸೋಮನಕಟ್ಟಿಮಠ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಂಗಮ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

**ಬಡತನದಲ್ಲೂ 97.33% ಅಂಕ – ರೋಹಿಣಿ ಬೆಟಗೇರಿ ಸಾಧನೆ**

# ಹಣ್ಣು ಮಾರುವ ಕುಟುಂಬದ ಮಗಳು ಜಿಲ್ಲೆಗೆ ದ್ವಿತೀಯ ಸ್ಥಾನ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರತಿಭೆ ಯಾರ ಸ್ವತ್ತೂ ಅಲ್ಲ, ಅದು ಸಾಧಕನ ಸ್ವತ್ತು ಎಂಬುದಕ್ಕೆ ಲಕ್ಷ್ಮೇಶ್ವರ ಪಟ್ಟಣದ ರೋಹಿಣಿ ಬೆಟಗೇರಿ ಜೀವಂತ ಉದಾಹರಣೆಯಾಗಿದ್ದಾಳೆ. ಹಣ್ಣು ಮಾರುವ ತಂದೆ-ತಾಯಿಯ ಮಗಳಾದ ರೋಹಿಣಿ ಬಡತನದಲ್ಲಿಯೇ ಓದಿ, ಪಿಯುಸಿ ಕಲಾ ವಿಭಾಗದಲ್ಲಿ 600ರಲ್ಲಿ 584 ಅಂಕ (97.33%) ಗಳಿಸಿ ಜಿಲ್ಲೆಗೆ ದ್ವಿತೀಯ ಸ್ಥಾನ ಪಡೆದು ಹೆತ್ತವರ ಹಾಗೂ ಕಾಲೇಜಿನ ಕೀರ್ತಿ ಹೆಚ್ಚಿಸಿದ್ದಾಳೆ.

ರೋಹಿಣಿ ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಶ್ರೀ ವೀರ ಗಂಗಾಧರ ಸ್ವತಂತ್ರ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿಯಾಗಿದ್ದು, ಇದೇ ಸಂಸ್ಥೆಯಲ್ಲಿ ಎಸ್ಎಸ್ಎಲ್‌ಸಿಯಲ್ಲಿ ಶೇ. 95 ಅಂಕ ಪಡೆದಿದ್ದಳು. ಪಿಯುಸಿಯಲ್ಲಿ ಕನ್ನಡ, ಹಿಂದಿ ಮತ್ತು ಭೂಗೋಳಶಾಸ್ತ್ರದಲ್ಲಿ ಶತಕಕ್ಕೆ ಶತಕ ಅಂಕಗಳನ್ನು ಗಳಿಸಿ ತನ್ನ ಪ್ರತಿಭೆ ತೋರಿದ್ದಾಳೆ. ಚಿತ್ರಕಲೆಯಲ್ಲಿ ವಿಶೇಷ ಆಸಕ್ತಿಯುಳ್ಳ ಈಕೆ ಉತ್ತಮ ಚಿತ್ರ ಮತ್ತು ಪೇಟಿಂಗ್ ಮಾಡುವಲ್ಲಿಯೂ ನಿಪುಣಳಾಗಿದ್ದಾಳೆ.



ರೋಹಿಣಿಯ ತಂದೆ ಪ್ರಭು ಹಾಗೂ ತಾಯಿ ಕವಿತಾ, ಅಜ್ಜಿ ಸೋಮಕ್ಕ ಲಕ್ಷ್ಮೇಶ್ವರದಲ್ಲಿ ಬಾಳೆಹಣ್ಣು ಮಾರಾಟ ಮಾಡಿ ಜೀವನ ಸಾಗಿಸುತ್ತಿದ್ದಾರೆ. ಆಶ್ರಯ ಯೋಜನೆಯಡಿ ದೊರೆತ ಚಿಕ್ಕ ಮನೆಯನ್ನು ಹೊರತುಪಡಿಸಿ ಮತ್ತಾವುದೇ ಆಸ್ತಿ ಇಲ್ಲ. ಹಣ್ಣು ಮಾರಾಟದ ಆದಾಯದಲ್ಲಿಯೇ ಕುಟುಂಬ ನಿರ್ವಹಣೆ ನಡೆಸುತ್ತಾ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಹಂಬಲವನ್ನು ಪಾಲಕರು ಹೊಂದಿದ್ದಾರೆ.

> "ಉತ್ತಮ ಫಲಿತಾಂಶ ಮಾಡಬೇಕು ಎಂಬ ಹಂಬಲದಿಂದ ಪರೀಕ್ಷೆ ಸಮಯದಲ್ಲಿ ಬೆಳಿಗ್ಗೆ ಬೇಗ ಎದ್ದು ಆಸಕ್ತಿಯಿಂದ ಓದುತ್ತಿದ್ದೆ. ಕಾಲೇಜಿನಲ್ಲಿ ಗಮನದಿಂದ ಪಾಠ ಕೇಳುತ್ತಿದ್ದೆ. ಮುಂದೆ ಪದವಿ ಪಡೆದು ಐಎಎಸ್ ಓದಿ ಉನ್ನತ ಹುದ್ದೆ ಪಡೆದು ಸಮಾಜ ಸೇವೆ ಮಾಡುವ ಆಸೆ ಇದೆ. ನನ್ನ ಯಶಸ್ಸಿಗೆ ಪಾಲಕರ ಮತ್ತು ಶಿಕ್ಷಕರ ಪ್ರೋತ್ಸಾಹ ಮುಖ್ಯ ಕಾರಣ."
>
> **– ರೋಹಿಣಿ**

> "ನಾವು ಬಡತನದ ಕಾರಣದಿಂದ ಪ್ರಾಥಮಿಕ ಶಿಕ್ಷಣವನ್ನೇ ಪೂರ್ಣಗೊಳಿಸಲಾಗಲಿಲ್ಲ. ಆದರೆ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವುದು ನಮ್ಮ ಕನಸು. ಮಗಳು ಐಎಎಸ್ ಆಗಬೇಕೆಂಬ ಆಸೆ ಹೊಂದಿದ್ದಾಳೆ, ಅವಳ ಕನಸು ಈಡೇರಿಸಲು ನಾವು ದುಡಿಯುತ್ತೇವೆ."
>
> **– ಪ್ರಭು, ಕವಿತಾ (ತಂದೆ-ತಾಯಿ).**

**ಯುವ ಪ್ರತಿಭೆಗಳನ್ನು ರಾಷ್ಟ್ರ-ಅಂತಾರಾಷ್ಟ್ರೀಯ ಮಟ್ಟಕ್ಕೆ ತಯಾರು ಮಾಡುವ ಶಿಬಿರಕ್ಕೆ ಚಾಲನೆ**

# ಜಿಲ್ಲೆಯಲ್ಲಿ ಫುಟ್ಬಾಲ್‌ಗೆ ಹೊಸ ಚೈತನ್ಯ: ಕೃಷ್ಣೇಗೌಡ ಪಾಟೀಲ್

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಫುಟ್ಬಾಲ್ ಕ್ರೀಡೆ ದಿನನಿತ್ಯ ಬೆಳೆಯುತ್ತಿದ್ದು, ಉತ್ತಮ ತರಬೇತುದಾರರಿಂದ ವೃತ್ತಿಪರ ತರಬೇತಿ ದೊರೆಯುತ್ತಿರುವುದು ಸಂತಸದ ಸಂಗತಿ ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಕೃಷ್ಣೇಗೌಡ ಪಾಟೀಲ್ ಹೇಳಿದರು.

ಗದಗ ಸಿಟಿ ಫುಟ್ಬಾಲ್ ಕ್ಲಬ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಯೋಗದಲ್ಲಿ ಕೆ. ಎಚ್. ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಫುಟ್ಬಾಲ್ ಬೇಸಿಗೆ ತರಬೇತಿ ಶಿಬಿರವನ್ನು ಸಸಿಗೆ ನೀರು ಎರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಶಿಬಿರದಲ್ಲಿ ಪಾಲ್ಗೊಳ್ಳುತ್ತಿರುವ ಮಕ್ಕಳು ರಾಜ್ಯ, ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಸಜ್ಜಾಗಬೇಕು ಎಂದು ಪ್ರೇರಣೆ ನೀಡಿದರು.



ಈ ಶಿಬಿರವು ಎಪ್ರಿಲ್ 08ರಿಂದ ಮೇ 31ರವರೆಗೆ ಪ್ರತಿದಿನ ಬೆಳಿಗ್ಗೆ 06:00ರಿಂದ 07:30ರವರೆಗೆ ನಡೆಯಲಿದ್ದು, ಜಿಲ್ಲೆಯ ಯುವ ಪ್ರತಿಭೆಗಳ ಅಭಿವೃದ್ಧಿಗೆ ಸಹಕಾರಿಯಾಗಲಿದೆ.

ಇದೇ ಸಂದರ್ಭದಲ್ಲಿ, ಕೆ. ಎಚ್. ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಅಂತರಾಷ್ಟ್ರೀಯ ಮಟ್ಟದ ಹೊನಲು ಬೆಳಕಿನ ಫುಟ್ಬಾಲ್ ಮೈದಾನ ನಿರ್ಮಾಣ ಕಾರ್ಯವನ್ನು ಆರಂಭಿಸಲಾಗುವುದು ಎಂದು ಭರವಸೆ ನೀಡಿದರು.

ಗದಗ ಸಿಟಿ ಫುಟ್ಬಾಲ್ ಕ್ಲಬ್ ಅಧ್ಯಕ್ಷ ಸ್ಯಾಮ್ ಸನ್ ಡಾನ್ ಮಾತನಾಡಿ, ಫುಟ್ಬಾಲ್ ಕ್ರೀಡೆಯು ಮಕ್ಕಳ ವೈಯಕ್ತಿಕ ಹಾಗೂ ಸಮಗ್ರ ಬೆಳವಣಿಗೆಗೆ ಪ್ರಮುಖವಾಗಿದೆ ಎಂದು ಹೇಳಿದರು. ಕಳೆದ ವರ್ಷದ ಕ್ಲಬ್ ಸಾಧನೆಗಳ ಬಗ್ಗೆ ಮಾಹಿತಿ ನೀಡಿ, ಮಕ್ಕಳಲ್ಲಿ ಕ್ರೀಡೆಗೆ ಹೆಚ್ಚಿನ ಆಸಕ್ತಿ ಬೆಳೆಸುವ ಅಗತ್ಯವಿದೆ ಎಂದು ಹೇಳಿದರು.

**ಬಿಸಿಎನ್ ಕಾಲೇಜಿಗೆ ಭರ್ಜರಿ ಫಲಿತಾಂಶ**

# ವಿಜ್ಞಾನ ವಿಭಾಗದಲ್ಲಿ ಅಂಜಲಿ ಲಮಾಣಿ ಅಗ್ರಸ್ಥಾನ







■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಿಸಿಎನ್ ವಿದ್ಯಾಸಂಸ್ಥೆಯ ಬಿಸಿಎನ್ ವಿಜನ್ ಪ.ಪೂ ಕಾಲೇಜು 2025-26ನೇ ಸಾಲಿನ ಪ.ಪೂ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿ ಕಾಲೇಜಿಗೆ ಕೀರ್ತಿ ತಂದಿದೆ.

ವಿಜ್ಞಾನ ವಿಭಾಗದಲ್ಲಿ ವಿದ್ಯಾರ್ಥಿಗಳು ಉತ್ತಮ ಅಂಕಗಳನ್ನು ಗಳಿಸಿದ್ದು, ಅಂಜಲಿ ಲಮಾಣಿ ಶೇ. 94.67 ಅಂಕಗಳೊಂದಿಗೆ ಅಗ್ರಸ್ಥಾನ ಪಡೆದಿದ್ದಾರೆ. ಆರತಿ ಹೊಸಮನಿ ಶೇ. 88.83, ಹರ್ಷಿತಾ ಪಾಟೀಲ ಶೇ. 88.33, ಪ್ರಿಯಾ ಕುಂದಗೋಳ ಶೇ. 82.16 ಹಾಗೂ ಸ್ನೇಹಾ ಜನಿವಾರದ ಶೇ. 81.67 ಅಂಕಗಳನ್ನು ಪಡೆದು ಗಮನಾರ್ಹ ಸಾಧನೆ ಮಾಡಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಹಾಗೂ ಕಾಲೇಜಿನ ಉತ್ತಮ ಫಲಿತಾಂಶಕ್ಕೆ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಬಸವರಾಜ ನೆಲವಿಗಿ, ಕಾರ್ಯದರ್ಶಿ ಲೋಹಿತ್ ನೆಲವಿಗಿ, ಪ್ರಾಚಾರ್ಯರಾದ ಮಂಜುನಾಥ ಬಂಡಿವಾಡ, ಡಿ.ಎಸ್. ಪ್ಯಾಟಿ, ಪ್ರೇಮಾ ಗೊನ್ನೆನ್ನವರ ಹಾಗೂ ಉಪನ್ಯಾಸಕರು ಮತ್ತು ಸಿಬ್ಬಂದಿಗಳು ಅಭಿನಂದನೆ ಸಲ್ಲಿಸಿದ್ದಾರೆ.

# ಖರ್ಗೆ ಹೇಳಿಕೆ ವಿರುದ್ಧ ಬಿಜೆಪಿ ಯುವ ಮೋರ್ಚಾದಿಂದ ಪೊಲೀಸ್ ಠಾಣೆಗೆ ದೂರು



■ ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಚುನಾವಣಾ ಪ್ರಚಾರದ ವೇಳೆ ನೀಡಿದ ಹೇಳಿಕೆಯನ್ನು ಖಂಡಿಸಿ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಹಾಗೂ ಗದಗ ನಗರ ಮಂಡಲ ಯುವ ಮೋರ್ಚಾ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ.

ಖರ್ಗೆ ಅವರು ಭಾಷಣದಲ್ಲಿ ಕುರಾನ್ ಓದುತ್ತಿರುವಾಗ ಹಾಗೂ ನಮಾಜ್ ಮಾಡುತ್ತಿರುವಾಗ ವಿಷ ಸರ್ಪ ಬಂದರೆ ನಮಾಜ್ ಮಾಡುವುದನ್ನು ಬಿಟ್ಟು ಅದನ್ನು ಕೊಲ್ಲಬೇಕು ಎಂದು ಕುರಾನ್‌ನಲ್ಲಿ ಉಲ್ಲೇಖಿಸಲಾಗಿದೆ. ಅದರಂತೆ ಈಗ ನೀವು ನಮಾಜ್ ಮಾಡುವಾಗ ಬಿಜೆಪಿ ಹಾಗೂ ಆರ್‌ಎಸ್‌ಎಸ್ ಕಾರ್ಯಕರ್ತರು ವಿಷ ಸರ್ಪಗಳಿದ್ದಂತೆ ಅವರನ್ನು ಕೊಲ್ಲದಿದ್ದರೆ ನೀವು ಬದುಕುವುದಿಲ್ಲ ಎಂದು ಖರ್ಗೆ ಬಹಿರಂಗ ಸಭೆಯಲ್ಲಿ ಮಾತನಾಡಿದ್ದನ್ನು ಖಂಡಿಸಿ ಬಿಜೆಪಿ ಯುವ ಮೋರ್ಚಾ ಪೊಲೀಸ್ ಠಾಣೆಗೆ ದೂರು ನೀಡಿದೆ.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ, ನಗರ ಮಂಡಲ ಅಧ್ಯಕ್ಷ ನವೀನ ಕೊಟೆಕಲ್, ಹಿರಿಯ ನಾಯಕ ಎಂ.ಎಂ. ಹಿರೇಮಠ, ಪ್ರಧಾನ ಕಾರ್ಯದರ್ಶಿ ಬಸವರಾಜ ನರೇಗಲ್, ವೀರೇಶಪ್ರಭು ಗದಗಿನ ಹಾಗೂ ಸುರೇಶ ಮರಳಪ್ಪನವರ, ಸುರೇಶ ಚಿತ್ತರಗಿ, ಇರ್ಷಾದ ಮಾನ್ವಿ, ಶಶಿಧರ ದಿಂಡೂರ, ಶಿವರಾಜಗೌಡ ಹಿರೇಮನಿಪಾಟೀಲ, ಅರವಿಂದ ಅಣ್ಣಿಗೇರಿ, ಮಂಜುನಾಥ ಹಳ್ಳೂರಮಠ, ಪ್ರವೀಣ ಹಡಪದ, ವಿನಾಯಕ ಕಾಟವಾ ಮತ್ತು ಶಂಕರ ಕಾಕಿ ಸೇರಿದಂತೆ ಅನೇಕ ಕಾರ್ಯಕರ್ತರು ಹಾಜರಿದ್ದರು.

**ಒಂದು ಹಳ್ಳಿಯಲ್ಲೂ ಕುಡಿಯುವ ನೀರಿನ ಅಭಾವ ಆಗದಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ಕಂದಕೂರ ಸೂಚನೆ**

# ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ನೋಡಿಕೊಳ್ಳಿ



> "ಒಂದು ಗ್ರಾಮದಲ್ಲಿಯೂ ಕುಡಿಯುವ ನೀರಿನ ಸಮಸ್ಯೆ ಉಂಟಾಗಬಾರದು. ಮುನ್ನೆಚ್ಚರಿಕೆಯಿಂದ ಕೆಲಸ ಮಾಡಿದರೆ ಮಾತ್ರ ಸಂಕಷ್ಟ ತಪ್ಪಿಸಲು ಸಾಧ್ಯ"
>
> **– ಚಂದ್ರಶೇಖರ ಬಿ. ಕಂದಕೂರ,** ತಾಲೂಕು ಪಂಚಾಯತ್,

ಸಭೆಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಎಂ.ಜಿ.ಎನ್.ಆರ್.ಇ.ಜಿ.ಎ) ಅಡಿಯಲ್ಲಿ ಕ್ರಿಯಾ ಯೋಜನೆ ಕುರಿತು ಚರ್ಚಿಸಿ, ಉದ್ಯೋಗಾವಕಾಶಗಳನ್ನು ಹೆಚ್ಚಿಸುವ ಜೊತೆಗೆ ಅಭಿವೃದ್ಧಿ ಕಾಮಗಾರಿಗಳನ್ನು ವೇಗಗೊಳಿಸಲು ಸೂಚಿಸಲಾಯಿತು. ಬೀದಿ ನಾಯಿಗಳ ಹಾವಳಿ ನಿಯಂತ್ರಣಕ್ಕೂ ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಲಾಯಿತು.

■ ವಿಜಯಸಾಕ್ಷಿ ಸುದ್ದಿ, ರೋಣ

ಬೇಸಿಗೆ ತೀವ್ರತೆ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಈಗಿನಿಂದಲೇ ಸಮಗ್ರ ಪೂರ್ವಸಿದ್ಧತೆ ಕೈಗೊಳ್ಳಬೇಕು ಎಂದು ರೋಣ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ. ಕಂದಕೂರ ಹೇಳಿದರು.

ತಾಲೂಕ ಪಂಚಾಯತ್ ಸಭಾಭವನದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರೋಣ ಹಾಗೂ ಗಜೇಂದ್ರಗಡ ತಾಲೂಕಿನ ಗ್ರಾಮಗಳಲ್ಲಿ ನೀರಿನ ಕೊರತೆ ಗಂಭೀರವಾಗಿ ಎದುರಾಗುವ ಸಾಧ್ಯತೆ ಇರುವುದರಿಂದ ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಹಾಳಾಗಿರುವ ಬೋರ್‌ವೆಲ್‌ಗಳನ್ನು ತ್ವರಿತವಾಗಿ ದುರಸ್ತಿ ಮಾಡುವುದು, ಅಗತ್ಯವಿರುವಡೆ ಹೊಸ ಬೋರ್‌ವೆಲ್‌ಗಳನ್ನು ತೋಡಿಸುವುದು, ಕುಡಿಯುವ ನೀರಿನ ಟ್ಯಾಂಕರ್‌ಗಳನ್ನು ಸಿದ್ಧವಾಗಿಡುವುದು ಹಾಗೂ ಸರಬರಾಜು ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ನಿರ್ದೇಶಿಸಿದರು.

ಗ್ರಾಮ ಪಂಚಾಯತ್ ಮಟ್ಟದಲ್ಲಿ ನೀರಿನ ಮೂಲಗಳ ಪರಿಶೀಲನೆ ನಡೆಸಿ, ನೀರಿನ ಮಟ್ಟ ಕುಸಿಯುತ್ತಿರುವ ಪ್ರದೇಶಗಳನ್ನು ಗುರುತಿಸಿ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು. ನೀರಿನ ಸರಬರಾಜಿನಲ್ಲಿ ನಿರ್ಲಕ್ಷ್ಯ ಕಂಡು ಬಂದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಲೈಬ್ರರಿ ಸೆಸ್‌ನ್ನು ಜಿಲ್ಲಾ ಪಂಚಾಯತ್ ಖಾತೆಗೆ ಜಮಾ ಮಾಡುವಂತೆ ಸೂಚನೆ ನೀಡಲಾಗಿದ್ದು, ಪ.ಜಾ/ಪ.ಪಂ ಸಮುದಾಯಕ್ಕೆ ಮೀಸಲಾದ ಅನುದಾನದ ಸಮರ್ಪಕ ಬಳಕೆ ಕುರಿತು ವಿಶೇಷ ಗಮನ ಹರಿಸಲು ತಿಳಿಸಲಾಯಿತು. ಪಂಚತಂತ್ರ 2.0 ಯೋಜನೆಯ ಬಾಕಿ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಲು ಸೂಚಿಸಲಾಯಿತು. ಜಿಲ್ಲಾ ಮಾನವ ಅಭಿವೃದ್ಧಿ ವರದಿ 2025 ಹಾಗೂ ಸುಸ್ಥಿರ ಅಭಿವೃದ್ಧಿ ಯೋಜನೆ 2031ರ ದತ್ತಾಂಶ ಅಂತಿಮಗೊಳಿಸುವ ಕುರಿತು ಸಭೆಯಲ್ಲಿ ಚರ್ಚೆ ನಡೆಸಲಾಗಿದ್ದು, ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ನಿಖರ ಮಾಹಿತಿ ಒದಗಿಸಲು ಸೂಚಿಸಲಾಯಿತು.

ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯ ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಸರ್ಕಾರದ ಮಾರ್ಗಸೂಚಿಯಂತೆ 2026-27ನೇ ಸಾಲಿನ ಎಸ್.ಎಫ್.ಸಿ 5%, 7.25% ಹಾಗೂ ಸಾಮಾನ್ಯ ನಿಧಿ ಶೇ.24.10% ಜೊತೆಗೆ 5% ಮತ್ತು 7.25% ಘಟಕಗಳ ಅಡಿಯಲ್ಲಿ ವೈಯಕ್ತಿಕ ಕಾರ್ಯಕ್ರಮಗಳಿಗೆ ಅನುದಾನವನ್ನು ಕಾಯ್ದಿರಿಸಲಾಗಿದೆ.

ಈ ಅನುದಾನದಡಿ ವಿವಿಧ ವೈಯಕ್ತಿಕ ಸೌಲಭ್ಯಗಳನ್ನು ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತರು ದಿನಾಂಕ 16-04-2026 ರಂದು ಸಂಜೆ 5.00 ಗಂಟೆಯೊಳಗಾಗಿ ಭರ್ತಿ ಮಾಡಿದ ಅರ್ಜಿ ನಮೂನೆ ಹಾಗೂ ಅಗತ್ಯ ದಾಖಲೆಗಳೊಂದಿಗೆ ಮುಳಗುಂದ ಪಟ್ಟಣ ಪಂಚಾಯತ್ ಕಾರ್ಯಾಲಯದಲ್ಲಿ ಸಲ್ಲಿಸಿ ಸ್ವೀಕೃತಿ ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ಹಾಗೂ ಅರ್ಜಿ ನಮೂನೆಗಾಗಿ ಮುಳಗುಂದ ಪಟ್ಟಣ ಪಂಚಾಯತ್ ಕಾರ್ಯಾಲಯವನ್ನು ಸಂಪರ್ಕಿಸಬಹುದು.

## ರಸ್ತೆ ಅಗಲೀಕರಣ ವೇಳೆ ಗುಡ್ಡ ಕುಸಿದು ಮೂವರು ಕಾರ್ಮಿಕರು ದುರ್ಮರಣ!

■ ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ

ಜಿಲ್ಲೆಯ ಹೊಸನಗರ ತಾಲೂಕಿನ ಹುಲಿಕಲ್ ಘಾಟ್‌ನಲ್ಲಿ ರಸ್ತೆ ಅಗಲೀಕರಣ ಕಾಮಗಾರಿಯ ವೇಳೆ ಭಾರೀ ದುರ್ಘಟನೆ ಸಂಭವಿಸಿದ್ದು, ಗುಡ್ಡ ಕುಸಿದು ಮೂವರು ಕಾರ್ಮಿಕರು ಸಾವನ್ನಪ್ಪಿದ್ದಾರೆ.

ಮೃತರನ್ನು ರಾಘವೇಂದ್ರ (37), ರಾಜು (30) ಮತ್ತು ಶಬ್ಬೀರ್ (40) ಎಂದು ಗುರುತಿಸಲಾಗಿದೆ.

ಕುಂದಾಪುರ-ಶಿವಮೊಗ್ಗ ಹೆದ್ದಾರಿಯಲ್ಲಿ ನಡೆಯುತ್ತಿದ್ದ ಕಾಮಗಾರಿಯ ಸಂದರ್ಭ ಈ ಘಟನೆ ನಡೆದಿದ್ದು, ಒಬ್ಬ ಹೊರ ರಾಜ್ಯದ ಕಾರ್ಮಿಕ ಸಹಿತ ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಘಟನೆಯಲ್ಲಿ ಸುಮಂತ ಮತ್ತು ಪರಮೇಶ್ ಸೇರಿದಂತೆ ನಾಲ್ವರಿಗೆ ಗಂಭೀರ ಗಾಯಗಳಾಗಿದ್ದು, ಅವರನ್ನು ನಗರದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಘಟನೆಯ ತಕ್ಷಣ ಸ್ಥಳಕ್ಕೆ ಪೊಲೀಸರು ಮತ್ತು ಅಗ್ನಿಶಾಮಕ ಸಿಬ್ಬಂದಿ ಧಾವಿಸಿ ರಕ್ಷಣಾ ಕಾರ್ಯಾಚರಣೆ ಆರಂಭಿಸಿದ್ದಾರೆ.

**ಕರ್ನಾಟಕ ಸರಕಾರ**
**ಜಿಲ್ಲಾ ಪಂಚಾಯತ್ ಗದಗ**
**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯ, ಕೊಠಡಿ ಸಂಖ್ಯೆ 101, ಜಿಲ್ಲಾ ಆಡಳಿತ ಭವನ, ಗದಗ**
ಇ-ಮೇಲ್ : dhogadag@gmail.com ದೂರವಾಣಿ : 08372-233996

ಕ್ರ.ಸಂ:ಪೂರೈಕೆ/ಇ-ಟೆಂಡರ್/2026-27 ದಿನಾಂಕ : 08.04.2026

**ಟೆಂಡರ್ ಪ್ರಕಟಣೆ**

2026-27 ನೇ ಸಾಲಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಅಧೀನ ಕಚೇರಿ ಹಾಗೂ ಅಧೀನ ಆರೋಗ್ಯ ಸಂಸ್ಥೆಗಳಿಗೆ ಹೊರಗುತ್ತಿಗೆ ಆಧಾರದ ವಿವಿಧ ವೃಂದದ ನೌಕರರ ಸೇವೆಯನ್ನು ಹೊರ ಸಂಪನ್ಮೂಲದಿಂದ ಒದಗಿಸುವ ಕುರಿತು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನಿಸಲಾಗಿದೆ. ಹಾಗೂ ಟೆಂಡರ್‌ನಲ್ಲಿ ಭಾಗವಹಿಸಲು ದಿನಾಂಕ : **18.04.2026** ರಂದು ಸಾಯಂಕಾಲ ಸಮಯ 04:30 ಹೆಚ್ಚಿನ ಮಾಹಿತಿಗಾಗಿ ಇ-ಪ್ರೊಕ್ಯೂರ್‌ಮೆಂಟ್ ವೆಬ್‌ಸೈಟ್ https://kppp.karnataka.gov.in/ಮೂಲಕ Tender Reference No-DHFWS/2025-26/SE2107 ಸಂಖ್ಯೆಯನ್ನು ಬಳಸಿಕೊಂಡು ಪರಿಶೀಲಿಸಬಹುದಾಗಿದೆ. **ಸಹಿ/- ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಗದಗ**

ವಾಸಾಸಂಇ/ಗದಗ/ಕೆಎಸ್ಎಂಸಿಎ/11/2026-27

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka